ಸಂಪುಟ : 9 ಸಂಚಿಕೆ 298 ಪುಟ : 4+2 ಬೆಲೆ: 3.00 ಗುರುವಾರ ಜನವರಿ 9 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 298 Pages : 4+2 Price : 3.00 Thursday January 9 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ತರಬೇತಿ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಸಂಸ್ಥೆ ಗದಗ-ಬೆಟಗೇರಿ ಹಾಗೂ ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ ವತಿಯಿಂದ ಜ.9ರಂದು ಮಧ್ಯಾಹ್ನ 3 ಗಂಟೆಗೆ ಶ್ರೀಮತಿ ಉಷಾದೇವಿ ಜಿ.ಕುಷ್ಟಗಿ ರೋಟರಿ ಕಮ್ಯುನಿಟಿ ಕೇರ್ ಸೆಂಟರ್, ರೋಟರಿ ಕಣ್ಣಿನ ಆಸ್ಪತ್ರೆ, ಕೆ.ಹೆಚ್ ಪಾಟೀಲ್ ಕ್ರೀಡಾಂಗಣದ ಹತ್ತಿರ, ಗದಗ ಇಲ್ಲಿ ಕೈತೋಟ ಮತ್ತು ತಾರಸಿ ತೋಟ ನಿರ್ಮಾಣ ಹಾಗೂ ನಿರ್ವಹಣೆ ಕುರಿತು ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಸಾವಯವ ಪದ್ಧತಿಯಲ್ಲಿ ಹಣ್ಣು, ತರಕಾರಿ, ಹೂವು, ಔಷಧೀಯ ಮತ್ತು ಸೌಗಂಧಿಕ ಸಸ್ಯಗಳನ್ನು ಬೆಳೆಸುವ ಕುರಿತು ಉಪನ್ಯಾಸ ಮತ್ತು ಪ್ರಾಯೋಗಿಕ ತರಬೇತಿಯನ್ನು ನೀಡಲಾಗುವುದು. ರೋಟರಿ ಕ್ಲಬ್ -ಗದಗ ಬೆಟಗೇರಿ, ಇನ್ನರ್ ವ್ಹೀಲ್ ಕ್ಲಬ್ ಗದಗ-ಬೆಟಗೇರಿ, ಮಹಿಳಾ ಸಂಘಗಳ ಸದಸ್ಯರು, ಆಸಕ್ತಿಯುಳ್ಳ ಸಾರ್ವಜನಿಕರು ಈ ತರಬೇತಿ ಕಾರ್ಯಕ್ರಮದಲ್ಲಿ ಭಾಗವಹಿಸಬಹುದೆಂದು ಕಾರ್ಯದರ್ಶಿಗಳಾದ ರೊ.ಸಂತೋಷ ಅಕ್ಕಿಯವರು ವಿನಂತಿಸಿದ್ದಾರೆ.

## ನೀರು ಪೂರೈಕೆಯಲ್ಲಿ ವ್ಯತ್ಯಯ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರಕ್ಕೆ ಸಗಟು ನೀರು ಸರಬರಾಜು ಮಾಡುವ ಹಮ್ಮಿಗಿ ಜ್ಯಾಕ್‌ವೆಲ್‌ದಿಂದ ಡಂಬಳ ಮಧ್ಯಂತರ ಪಂಪಿಂಗ್ ಸ್ಟೇಷನ್‌ಗೆ ಬರುವ ಸಿಂಗಟಾಲೂರ ಹಿಂಭಾಗದಲ್ಲಿ ಮುಖ್ಯ ಕೊಳವೆ ಮಾರ್ಗಗಳ ದುರಸ್ತಿ ಕಾರ್ಯವನ್ನು ಯುದ್ಧೋಪಾದಿಯಲ್ಲಿ ಕೈಗೆತ್ತಿಕೊಳ್ಳಲಾಗಿದ್ದು, ದುರಸ್ತಿ ಕಾರ್ಯ ಪೂರ್ಣಗೊಳ್ಳುವವರೆಗೂ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗುವುದರಿಂದ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು.

ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರು ತಮ್ಮ ನೀರಿನ ಕರವನ್ನು ತುಂಬಬೇಕು. ಒಂದು ವೇಳೆ ಬಾಕಿ ಉಳಿದ ನೀರಿನ ಬಿಲ್ ತುಂಬದೇ ಹೋದರೆ, ನಳಗಳನ್ನು ಬಂದ ಮಾಡಲಾಗುತ್ತದೆ. ನೀರಿನ ಕರವನ್ನು ತುಂಬಲು ಗದಗ-ಬೆಟಗೇರಿ ನಗರಸಭೆಯ ಪ್ರಕಟಣೆ ತಿಳಿಸಿದೆ.

## ಮಕರ ಸಂಕ್ರಾಂತಿಯಂದು ಮೃಗಾಲಯ ವೀಕ್ಷಣೆಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಮೃಗಾಲಯವು ಮಕರ ಸಂಕ್ರಾಂತಿಯ ಪ್ರಯುಕ್ತ ಜನವರಿ 14ರಂದು ವೀಕ್ಷಣೆಗೆ ತೆರೆದಿರುತ್ತದೆ.

ಸಾಮಾನ್ಯವಾಗಿ ಪ್ರತಿ ಮಂಗಳವಾರದಂದು ಗದಗ ಮೃಗಾಲಯವು ರಜೆ ಇರುತ್ತದೆ. ಆದರೆ ಈ ಹಬ್ಬವನ್ನು ಸಾರ್ವಜನಿಕರು ತಮ್ಮ ಕುಟುಂಬದೊಂದಿಗೆ ವನ್ಯ ಜೀವಿಗಳು ಹಾಗೂ ಪ್ರಕೃತಿಯ ಸೌಂದರ್ಯವನ್ನು ಸವಿಯುವುದರ ಮೂಲಕ ಆಚರಿಸಲು ಅನುಕೂಲವಾಗುವಂತೆ ಜನವರಿ 14 ರಂದು ಮಂಗಳವಾರದಂದು ಮೃಗಾಲಯ ವೀಕ್ಷಣೆಗೆ ತೆರೆಯಲಾಗಿದೆ.

ಈ ಅವಕಾಶವನ್ನು ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳಬೇಕೆಂದು ಗದಗ ವಿಭಾಗದ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಡಲೆ ಬೆಳೆ ಖರೀದಿಯ ಬಾಕಿ ಹಣ ಬಿಡುಗಡೆಗೆ ಆಗ್ರಹಿಸಿ ಅನ್ನದಾತರ ಹೋರಾಟ । ಜಿಲ್ಲಾಡಳಿತ ಕಚೇರಿಯೆದುರು ಸೃಷ್ಟಿಯಾದ ಗೊಂದಲದ ವಾತಾವರಣ

# ವಿಷ ಸೇವಿಸಿದ ರೈತ ಲಕ್ಷ್ಮಿಯರು

■ ವಿಜಯಸಾಕ್ಷಿ ಸುದ್ದಿ, ಗದಗ

ಕಡಲೆ ಖರೀದಿಯ ಬಾಕಿ ಹಣ ಕೊಡಿಸುವಂತೆ ಒತ್ತಾಯಿಸಿ ರೈತರು ನಡೆಸುತ್ತಿರುವ ಅಹೋರಾತ್ರಿ ಧರಣಿ 3ನೇ ದಿನಕ್ಕೆ ಕಾಲಿಟ್ಟಿದೆ. ಬುಧವಾರ ಜಿಲ್ಲಾಡಳಿತ ಭವನದ ಎದುರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದ ಇಬ್ಬರು ರೈತ ಮಹಿಳೆಯರು ವಿಷ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಡೆದಿದೆ.

ಪ್ರತಿಭಟನೆಯ ಮೊದಲೆರಡು ದಿನ ರೈತರು ಜಿಲ್ಲಾಡಳಿತ ಭವನದ ಗೇಟ್‌ಗೆ ಜಾನುವಾರುಗಳನ್ನು ಕಟ್ಟಿ, ಮೇವು ಹಾಕಿ ಆಕ್ರೋಶ ವ್ಯಕ್ತಪಡಿಸಿದ್ದರು. ಬುಧವಾರದ ಹೊತ್ತಿಗೆ ಪ್ರತಿಭಟನೆಯ ಕಾವು ಇನ್ನಷ್ಟು ಹೆಚ್ಚಾಗಿದ್ದು, ರೈತರು ಹೆದ್ದಾರಿ ಬಂದ್ ಮಾಡಿ ಹೋರಾಟವನ್ನು ತೀವ್ರಗೊಳಿಸಿದರು. ಇಷ್ಟಾದರೂ ಅಧಿಕಾರಿಗಳು ಸ್ಪಂದಿಸದಿದ್ದಾಗ ರೈತ ಮಹಿಳೆಯರು ಹೆದ್ದಾರಿಯಲ್ಲಿ ಹೊರಳಾಡಿ, ಬಾಯಿ ಬಡಿದುಕೊಂಡು ಆಕ್ರೋಶ ವ್ಯಕ್ತಪಡಿಸಿದರು. ಇಷ್ಟಾದರೂ ಜಿಲ್ಲಾಡಳಿತದಿಂದ ಸ್ಪಂದನೆ ಸಿಗದಿದ್ದಾಗ ರೈತ ಮಹಿಳೆಯೊಬ್ಬರು ಏಕಾಏಕಿ ವಿಷ ಸೇವಿಸಿದರು. ಪೊಲೀಸರು, ಪ್ರತಿಭಟನಾಕಾರರು



ವಿಷ ಸೇವಿಸಿದ ಮಹಿಳೆಯತ್ತ ಧಾವಿಸುತ್ತಿದ್ದಂತೆ ಇನ್ನೊಬ್ಬ ರೈತ ಮಹಿಳೆಯೂ ವಿಷ ಸೇವನೆಗೆ ಮುಂದಾದರು. ತಕ್ಷಣ ಮಹಿಳಾ ಪೊಲೀಸ್ ಸಿಬ್ಬಂದಿ ಹಾಗೂ ಹಿರಿಯ ಅಧಿಕಾರಿಗಳು ವಿಷದ ಬಾಟಲಿಗಳನ್ನು ಕಿತ್ತುಕೊಂಡು ಅನಾಹುತ ತಪ್ಪಿಸಿದರು. ತಕ್ಷಣವೇ ಸ್ಥಳದಲ್ಲಿದ್ದ ಆಂಬುಲೆನ್ಸ್ ಮೂಲಕ ವಿಷಸೇವನೆ ಮಾಡಿದ್ದ ರೈತ ಮಹಿಳೆಯರನ್ನು ಜಿಮ್ಸ್ ಆಸ್ಪತ್ರೆಗೆ ರವಾನಿಸಿದರು. ವಿಷ ಸೇವನೆ ಮಾಡಿದ ರೈತ ಮಹಿಳೆಯರನ್ನು ಸರಸ್ವತಿ ದಾಸರ, ಗೀತಾ ಬಾಲಪ್ಪನವರ ಎಂದು ಗುರುತಿಸಲಾಗಿದೆ.

ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಸಂವರ್ಧನ ಸಂಸ್ಥೆ (ಎನ್‌ಆರ್‌ಎಲ್‌ಎಂ) ಗದಗ ಒಕ್ಕೂಟದಡಿ ಬರುವ ಮಹಿಳಾ ಸ್ವಸಹಾಯ ಸಂಘಗಳ ಮೂಲಕ ಎನ್‌ಆರ್‌ಎಲ್‌ಎಂ ಜಿ.ಪಂ ಕಾರ್ಯಕ್ರಮ ವ್ಯವಸ್ಥಾಪಕ ಚಂದ್ರಶೇಖರ ಎಲಿಗಾರ, ತಾ.ಪಂ ಕಾರ್ಯಕ್ರಮ ವ್ಯವಸ್ಥಾಪಕ ಆನಂದ ಮೆಳವಣಿಕಿ ಹಾಗೂ ತಾಲೂಕು ತಾಂತ್ರಿಕ ಸಂಯೋಜಕ ಜಗದೀಶ ಕಂಬಾಳಿಮಠ ಎಂಬುವವರು ದಾವಣಗೆರೆಯ ಮಾರುತಿ ಗೌಡ ಎಂಬುವವರೊಂದಿಗೆ ಮಧ್ಯಸ್ಥಿಕೆ ವಹಿಸಿ ಮೂರು ತಿಂಗಳಲ್ಲಿ ಅಂದಾಜು 27 ಕೋಟಿ ರೂ ಮೌಲ್ಯದ ಕಡಲೆಯನ್ನು ಹಲವು ಗ್ರಾಮಗಳಲ್ಲಿ ವಿಕ್ರಿ ಮಾಡಿಸಿದ್ದರು.

ಇದರ ಭಾಗವಾಗಿ 20 ಕೋಟಿ ರೂ ಮೊತ್ತವನ್ನು ಆರ್‌ಟಿಜಿಎಸ್ ಮೂಲಕ ಪಾವತಿಸಿದ್ದರು. ಬಾಕಿ ಉಳಿದ 6.50 ಕೋಟಿ ರೂ ಪಾವತಿಯಾಗಿಲ್ಲ. ಗದಗ ಮತ್ತು ಮುಂಡರಗಿ ತಾಲೂಕಿನ 450 ರೈತರಿಂದ ಕಡಲೆ ಖರೀದಿಸಿ 12 ತಿಂಗಳಾದರೂ ಬಾಕಿ ಹಣ ಪಾವತಿಸಿಲ್ಲ. ಹೀಗಾಗಿ ಜಿಲ್ಲಾಡಳಿತ ಮಧ್ಯ ಪ್ರವೇಶಿಸಿ ಹಣ ಕೊಡಿಸಬೇಕು ಎಂದು ರೈತರು ಆಗ್ರಹಿಸಿದರು.

ಗದಗ ಜಿಲ್ಲಾಡಳಿತ ಭವನದ ಎದುರು ಬುಧವಾರ ಮುಂಜಾನೆಯಿಂದಲೇ ರೈತರು ವಿನೂತನ ರೀತಿಯಲ್ಲಿ ಪ್ರತಿಭಟನೆ ಆರಂಭಿಸಿದ್ದರು. ಬಾರಕೋಲ್ ಮೂಲಕ ಚಾಟಿ ಬೀಸಿ, ಒನಕೆ ಹಿಡಿದು ಮಾನವ ಸರಪಳಿ ರಚಿಸಿ, ರಸ್ತೆ ಬಂದ್ ಮಾಡಿ, ವಾಹನ ಅಡ್ಡಗಟ್ಟಿ ಪ್ರತಿಭಟನೆಯ ಸ್ವರೂಪ ತೀವ್ರಗೊಳಿಸಿದ್ದರು. ಈ ನಡುವೆ ರೈತ ಮಹಿಳೆಯರು ವಿಷ ಸೇವನೆ ಮಾಡಿದ್ದು ಪ್ರತಿಭಟನಾಕಾರರಲ್ಲಿಯೂ ಆತಂಕ ಮೂಡಿಸಿದೆ.

ರೈತ ಮಹಿಳೆಯರು ವಿಷ ಸೇವಿಸಿದ ಘಟನೆಯಿಂದ ಸ್ಥಳದಲ್ಲಿ ಗೊಂದಲದ ವಾತಾವರಣ ನಿರ್ಮಾಣವಾದ ಹಿನ್ನೆಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸ್ಥಳಕ್ಕೆ ಆಗಮಿಸಿ ರೈತ ಮಹಿಳೆಯರ ಮನವೊಲಿಸಲು ಪ್ರಯತ್ನಿಸಿದರೂ ಯಾವುದೇ ಪ್ರಯೋಜನವಾಗಲಿಲ್ಲ. ನಂತರ ನಿಮ್ಮ ಸಮಸ್ಯೆಯ ಕುರಿತು ಚರ್ಚಿಸಲು ಜಿ.ಪಂ ಸಿಇಓ ಅವರನ್ನೇ ಇಲ್ಲಿಗೆ ಕರೆಸಲಾಗುವುದು, ಅವರೊಂದಿಗೆ ಚರ್ಚಿಸಿ ಎಂದು ಮನವೊಲಿಸಿದ ತರುವಾಯ ರೈತರು ರಸ್ತೆ ತಡೆ ಹಿಂಪಡೆದು ಮಾತುಕತೆಗೆ ಮುಂದಾದರು.



'ಭೂ ಸುರಕ್ಷಾ' ಯೋಜನೆಗೆ ಚಾಲನೆ ನೀಡಿದ ಶಾಸಕ ಜಿ.ಎಸ್. ಪಾಟೀಲ


# ಭೂ ದಾಖಲೆಗಳು ನಿಮ್ಮ ಅಂಗೈಯಲ್ಲಿ

■ ವಿಜಯಸಾಕ್ಷಿ ಸುದ್ದಿ, ರೋಣ

ರಾಜ್ಯ ಸರಕಾರ ಅತ್ಯಂತ ಮಹತ್ವದ ಭೂ ಸುರಕ್ಷಾ ಯೋಜನೆಯನ್ನು ಜಾರಿಗೆ ತರುವ ಮೂಲಕ ನಿಮ್ಮ ಭೂ ದಾಖಲೆಗಳನ್ನು ನಿಮ್ಮ ಅಂಗೈಯಲ್ಲಿ ನೀಡುವ ಮೂಲಕ ಅನೇಕ ರೀತಿಯ ಗೊಂದಲಗಳನ್ನು ನಿವಾರಿಸಿದೆ. ಇನ್ನು ನಿಮ್ಮ ಅಗತ್ಯ ದಾಖಲೆಗಳನ್ನು ನೀವು ಇದ್ದ ಜಾಗೆಯಲ್ಲಿಯೇ ನೋಡಬಹುದು ಎಂದು ರಾಜ್ಯ ಖನಿಜ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಬುಧವಾರ ತಹಸೀಲ್ದಾರ್ ಕಚೇರಿಯಲ್ಲಿ ಭೂ ದಾಖಲೆಗಳ ಡಿಜಿಟಲೀಕರಣದ ಭೂ ಸುರಕ್ಷಾ ಯೋಜನೆಗೆ ಚಾಲನೆ ನೀಡಿ ಮಾತನಾಡಿದರು.

ತಾಲೂಕು ಕಚೇರಿ, ಸರ್ವೆ ಮತ್ತು ನೋಂದಣಿ ಇಲಾಖೆಗಳ ಎಲ್ಲ ಭೂ ದಾಖಲೆಗಳನ್ನು ಹಾಗೂ ಹಳೆಯ ದುಸ್ಥಿತಿಯಲ್ಲಿರುವ ಭೂ ದಾಖಲೆಗಳನ್ನು ಶಾಶ್ವತ ಡಿಜಿಟಲ್ ದಾಖಲೆಗಳಾಗಿ ಪರಿವರ್ತನೆ ಮಾಡಿದೆ. ಮುಖ್ಯವಾಗಿ ರೆಕಾರ್ಡ್ ರೂಂಗಳಿಂದ ಪಡೆದುಕೊಳ್ಳಲು ಇರುವ ತೊಂದರೆಗಳನ್ನು ನಿವಾರಿಸಲು ಭೂ ಸುರಕ್ಷಾ ಯೋಜನೆ




ಮಹತ್ವ ಪಡೆದಿದೆ ಎಂದ ಅವರು, ರೈತರು ಯೋಜನೆಯ ಬಗ್ಗೆ ತಿಳಿದುಕೊಳ್ಳಬೇಕು ಎಂದು ಸಲಹೆ ನೀಡಿದರು. ಇದಲ್ಲದೆ ರಾಜ್ಯ ಸರಕಾರ ನಾಡಿನ ರೈತರ ಹಿತಕ್ಕಾಗಿ, ಸಾರ್ವಜನಿಕರ ಮತ್ತು ಮಹಿಳೆಯರ ಕಲ್ಯಾಣಕ್ಕಾಗಿ ಅನೇಕ ಮಹತ್ವದ ಯೋಜನೆಗಳನ್ನು ಜಾರಿಗೆ ತಂದು ಅವುಗಳನ್ನು ನೇರವಾಗಿ ಫಲಾನುಭವಿಗಳಿಗೆ ಮುಟ್ಟಿಸುವಲ್ಲಿ ತನ್ನ ಪ್ರಾಮಾಣಿಕತೆಯನ್ನು ಮೆರೆದಿದೆ. ಅಲ್ಲದೆ ಭೂ ಸುರಕ್ಷಾ ಯೋಜನೆಯನ್ನು ಜಾರಿಗೆ ತಂದು ನಾಡಿನ ಜನರಿಗೆ ಮತ್ತಷ್ಟು ನೆಮ್ಮದಿಯನ್ನು ನೀಡಿದ್ದು, ಸರಕಾರದ ಮೇಲೆ ನಾಡಿನ ಜನರ ಆಶೀರ್ವಾದ ಇರಬೇಕು ಎಂದರು.

ತಹಸೀಲ್ದಾರರಾದ ನಾಗರಾಜ ಕೆ, ಕಿರಣಕುಮಾರ ಕುಲಕರ್ಣಿ, ಉಪತಹಸೀಲ್ದಾರ್ ಜೆ.ಟಿ. ಕೊಪ್ಪದ, ವಿ.ಬಿ. ಸೋಮನಕಟ್ಟಿಮಠ, ಸೋಮು ನಾಗರಾಜ, ಸಿಬ್ಬಂದಿಗಳಾದ ಎಲ್.ಎಸ್. ದಾಸಪ್ಪನವರ, ಸಂಗೀತಾ ತಳವಾರ, ಸುವರ್ಣಾ ಜುಮ್ಮನಕಟ್ಟಿ ಸೇರಿದಂತೆ ಅನೇಕರಿದ್ದರು.

ಈ ಯೋಜನೆ ನಿಮ್ಮ ದಾಖಲೆಗಳನ್ನು ನಿಮ್ಮ ಕೈಗೆ ತಲುಪಿಸುವ ಯೋಜನೆಯಾಗಿದೆ. ವಿಳಂಬ, ಅಡೆತಡೆಗಳನ್ನು ಆಲಿಸಿ, ತ್ವರಿತ ಆಡಳಿತ ಸೇವೆಯನ್ನು ಒದಗಿಸುವ ಪ್ರಯತ್ನವಾಗಿದೆ. ಡಿಜಿ ಸ್ಪರ್ಶದಿಂದ ಉತ್ತಮ ಜನಪರ ಆಡಳಿತ, ನಿಮ್ಮ ಭೂ ಒಡೆತನಕ್ಕೊಂದು ಗ್ಯಾರಂಟಿ ಸಿಗಲಿದೆ.

– ಜಿ.ಎಸ್. ಪಾಟೀಲ. ಶಾಸಕರು, ರೋಣ.

ದೊಡ್ಡೂರ ಗ್ರಾ.ಪಂ ನೂತನ ಕಟ್ಟಡ ನಿರ್ಮಾಣ ಕಾಮಗಾರಿಯ ಭೂಮಿಪೂಜೆ

## ಗ್ರಾ.ಪಂಗಳು ಸ್ವಂತ ಕಟ್ಟಡ ಹೊಂದಬೇಕಿದೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಾತ್ಮ ಗಾಂಧೀಜಿ ಅವರ ಗ್ರಾಮ ರಾಜ್ಯದ ಕನಸು ಸಾಕಾರಗೊಳ್ಳುವಲ್ಲಿ ಗ್ರಾಮ ಪಂಚಾಯಿತಿಯ ವ್ಯವಸ್ಥೆ ಪೂರಕವಾಗಿದೆ. ಗ್ರಾಮ ಪಂಚಾಯಿತಿಗಳು ಗ್ರಾಮೀಣ ಜನರ ಸರ್ವತೋಮುಖ ಅಭಿವೃದ್ಧಿಯ ಶಕ್ತಿ ಕೇಂದ್ರಗಳಾಗಿವೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅವರು ಬುಧವಾರ ತಾಲೂಕಿನ ದೊಡ್ಡೂರ ಗ್ರಾಮದಲ್ಲಿ ಜಿಲ್ಲಾ ಪಂಚಾಯತ ಗದಗ, ತಾ.ಪಂ ಲಕ್ಷ್ಮೇಶ್ವರ ಹಾಗೂ ಗ್ರಾ.ಪಂ ದೊಡ್ಡೂರ ಸಹಯೋಗದಲ್ಲಿ 2024-25ನೇ ಸಾಲಿನ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 20 ಲಕ್ಷ ಅಂದಾಜು ವೆಚ್ಚದಲ್ಲಿ ದೊಡ್ಡೂರ ಗ್ರಾಮ ಪಂಚಾಯಿತಿಯ ನೂತನ ಕಟ್ಟಡ ನಿರ್ಮಾಣ ಹಾಗೂ ವಿವಿಧ ಕಾಮಗಾರಿಗಳ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಅಧಿಕಾರ ವಿಕೇಂದ್ರೀಕರಣದಿಂದ ಗ್ರಾಮೀಣ ಆಶೋತ್ತರಗಳನ್ನು




ಈಡೇರಿಸುವಲ್ಲಿ ಗ್ರಾ.ಪಂಗಳ ಪಾತ್ರ ಮಹತ್ವದ್ದಾಗಿವೆ. ಕ್ಷೇತ್ರದಲ್ಲಿನ ಗ್ರಾ.ಪಂಗಳು ಸ್ವಂತ ಕಟ್ಟಡ ಹೊಂದಬೇಕಾಗಿದ್ದು, ಈ ನಿಟ್ಟಿನಲ್ಲಿ ಹೆಚ್ಚಿನ ಮುತುವರ್ಜಿ ವಹಿಸಲಾಗುವುದು. ಕಾರಣಾಂತರಗಳಿಂದ ಲಕ್ಷ್ಮೇಶ್ವರ ತಾಲೂಕಿನ ಮಾಡಳ್ಳಿ, ಗೋವನಾಳ ಸೇರಿ ಕೆಲ ಕಡೆ ಅರ್ಧಕ್ಕೆ ನಿಂತಿರುವ ಕಾಮಗಾರಿಗಳನ್ನು ಪೂರ್ಣಗೊಳಿಸುವಂತೆ ಅಧಿಕಾರಿಗಳು ಗಮನ ಹರಿಸಬೇಕು. ಜನರ ಬೇಡಿಕೆಯಂತೆ ಆದಷ್ಟು ಬೇಗ ಗ್ರಾಮದ ಹತ್ತಿರದ ಸೇತುವೆ, ದೊಡ್ಡೂರ-ಬೆಳ್ಳಟ್ಟಿ ರಸ್ತೆ ಅಭಿವೃದ್ಧಿ ಕಾರ್ಯ ನಡೆಯಲಿದೆ ಎಂದರು.

ಈ ಸಂದರ್ಭದಲ್ಲಿ ಹೂವಿನಶಿಗ್ಗಿ ವೀರಕ್ತಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು, ಮಾಜಿ ಶಾಸಕ ರಾಮಣ್ಣ ಲಮಾಣಿ, ತಹಸೀಲ್ದಾರ ವಾಸುದೇವ ಸ್ವಾಮಿ, ತಾ.ಪಂ ಇಓ ಕೃಷ್ಣಪ್ಪ ಧರ್ಮರ, ಗ್ರಾ.ಪಂ ಅಧ್ಯಕ್ಷ ಚಂದ್ರಶೇಖರ ಈಳಗೇರ, ಉಪಾಧ್ಯಕ್ಷೆ ಸುಶೀಲಾ ಲಮಾಣಿ, ಟೊಪಣ್ಣ ಲಮಾಣಿ, ಬಿ.ಎಸ್. ಈಳಗೇರ, ಪುಂಡಲೀಕ ಲಮಾಣಿ, ಜಗದೀಶ್ ಈಳಗೇರ, ಅಮರಪ್ಪ ಗುಡಗುಂಟಿ, ಪಿಡಿಓ ಎಸ್.ಎಫ್. ಮಾಳವಾಡ ಗ್ರಾ.ಪಂ ಕಾರ್ಯದರ್ಶಿ ಗುರುವಿನ ಸೇರಿದಂತೆ ಗ್ರಾ.ಪಂ ಸರ್ವ ಸದಸ್ಯರು, ಸಿಬ್ಬಂದಿಗಳು, ಗ್ರಾ.ಪಂ ವ್ಯಾಪ್ತಿಯ ಮುಖಂಡರು ಇದ್ದರು. ಪಿಡಿಓ ಎಸ್.ಎಫ್. ಮಾಳವಾಡ ನಿರೂಪಿಸಿದರು.

ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಭರತ್ ಎಸ್ ಸೂಚನೆ

# ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸ ಹೆಚ್ಚಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಎಲ್ಲಾ ಪ್ರೌಢಶಾಲೆಗಳ ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕರು ಎಸ್‌ಎಸ್‌ಎಲ್‌ಸಿ ಫಲಿತಾಂಶ ಉತ್ತಮಪಡಿಸಲು ಶಾಲೆಗಳಲ್ಲಿ ಡಿಸೆಂಬರ್ ಒಳಗಾಗಿ ಪಠ್ಯಕ್ರಮ ಪೂರ್ಣಗೊಳಿಸಲು ಸೂಚಿಸಲಾಗಿತ್ತು. ಅದರಂತೆ ಪೂರ್ಣಗೊಳಿಸಿದ್ದು, ಜನವರಿ 20ರಿಂದ ಪ್ರಾರಂಭವಾಗುವ ವಿಭಾಗ ಮಟ್ಟದ ಪರೀಕ್ಷೆಗೆ ತಮ್ಮ ಮಕ್ಕಳನ್ನು ಸೂಕ್ತ ರೀತಿಯಲ್ಲಿ ತಯಾರುಗೊಳಿಸುವುದು, ಸಾಮರ್ಥ್ಯ ಅನ್ವೇಷಣೆ ಪರೀಕ್ಷೆ ಹಾಗೂ ಘಟಕ ಪರೀಕ್ಷೆಗಳ ವಿಶ್ಲೇಷಣೆ ಮಾಡಿ ವಿದ್ಯಾರ್ಥಿಗಳಿಗೆ ಸೂಕ್ತ ಮಾರ್ಗದರ್ಶನ ಮಾಡಿ ವಿದ್ಯಾರ್ಥಿಗಳಲ್ಲಿ ಪರೀಕ್ಷೆ ಬರೆಯಲು ಆತ್ಮವಿಶ್ವಾಸ ಹೆಚ್ಚುವಂತೆ ಮಾಡಬೇಕು ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಸೂಚಿಸಿದರು.

ಶಾಲಾ ಶಿಕ್ಷಣ ಇಲಾಖೆ




ಗದಗ, ಯೂನಿವರ್ಸಲ್ ನಾಲೆಡ್ಜ್ ಟ್ರಸ್ಟ್ ಹಾಗೂ ಗ್ರಾಮ ವಿಕಾಸ ಸೊಸೈಟಿ ಇವರ ಸಹಯೋಗದಲ್ಲಿ ಆದರ್ಶ ಶಿಕ್ಷಣ ಸಮಿತಿಯ ಕಾಮರ್ಸ್ ಮಹಾವಿದ್ಯಾಲಯದ ಸಭಾಂಗಣದಲ್ಲಿ ಗದಗ ಜಿಲ್ಲೆಯ ಪ್ರೌಢಶಾಲಾ ಮುಖ್ಯ ಶಿಕ್ಷಕರಿಗೆ ಹಮ್ಮಿಕೊಂಡಿದ್ದ ಟಜಚಿಡಿಟಿಟಿಂ ಟಚಿಜಜ ಜಚಿಥಿ ತಿಣು ಠಿಥು-ಣುತಜ ಜಟಿಜಡಿರಿಥಿ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡುತ್ತಿದ್ದರು.

ಪರೀಕ್ಷೆಗಳನ್ನು ವೆಬ್ ಕಾಸ್ಟಿಂಗ್ ಅಡಿಯಲ್ಲಿ ನಡೆಸಬೇಕಿದ್ದು, ಎಸ್ ಎ1 ಪರೀಕ್ಷೆಯಲ್ಲಿ ಶೇ.40ಕ್ಕಿಂತ ಕಡಿಮೆ ಇರುವ ಶಾಲೆಗಳಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳು ಖುದ್ದಾಗಿ ಭೇಟಿ ನೀಡಿ ಮಾರ್ಗದರ್ಶನ ನೀಡಬೇಕು. ಪ್ರತಿ ಶಾಲಾ ಹಂತದಲ್ಲಿ ಪ್ರತಿ ದಿನ ಎರಡು ವಿಷಯಗಳ ಕಾರ್ಯಾಗಾರ ಹಮ್ಮಿಕೊಂಡು 6 ವಿಷಯಗಳ ಕಠಿಣ ಹಾಗೂ ಮುಖ್ಯಾಂಶಗಳಲ್ಲಿ ಮಗು ಕಲಿಯದ ಹಾಗೂ ಅರ್ಧ ಕಲಿತ ಅಂಶಗಳ ವಿಷಯವಾರು ಪಟ್ಟಿ ಮಾಡಿ, ಈ ಕುರಿತು ತಮ್ಮ ಶಾಲೆಯ ಶಿಕ್ಷಕರು ಹಾಗೂ ಅಗತ್ಯಾನುಸಾರ ಇತರ ಶಾಲಾ ಶಿಕ್ಷಕರನ್ನು ಆಹ್ವಾನಿಸಿ ಕಾರ್ಯಾಗಾರ ಕೈಗೊಳ್ಳಬೇಕು ಎಂದು ತಿಳಿಸಿದರು.

ವೇದಿಕೆಯ ಮೇಲೆ ಜಿಲ್ಲಾ ಉಪ ಯೋಜನಾ ಸಮನ್ವಯ ಅಧಿಕಾರಿಗಳಾದ ಎಂ.ಎಚ್. ಕಂಬಳಿ, ಜಿಲ್ಲೆಯ ಎಲ್ಲ ಕ್ಷೇತ್ರ ಶಿಕ್ಷಣಾಧಿಕಾರಿಗಳು, ವಿಷಯ ಪರಿವೀಕ್ಷಕರು, ಕ್ಷೇತ್ರ ಸಮನ್ವಯಾಧಿಕಾರಿಗಳು ಹಾಗೂ ಯೂನಿವರ್ಸಲ್ ನಾಲೆಡ್ಜ್ ಟ್ರಸ್ಟ್‌ನ ಪದಾಧಿಕಾರಿಗಳು ಹಾಜರಿದ್ದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್. ಎಸ್. ಬುರಡಿ ಉಪಸ್ಥಿತರಿದ್ದು, ಇಲಾಖೆಯ 20 ಅಂಶಗಳ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಿ. ಎಲ್ಲಾ ಪ್ರಯತ್ನಗಳು ಪರಿಣಾಮಕಾರಿಯಾಗಿರಲಿ, ಪ್ರತಿ ಶಾಲೆಯ ಎಲ್ಲಾ ಶಿಕ್ಷಕರು ಮಗುವನ್ನು ಬೆಂಬಲಿಸುವ ಮೂಲಕ Need based and Clinical approach ಅನುಸರಿಸಬೇಕು ಎಂದರು.

ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ವಿಜೇತರಾದ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ವಿತರಣೆ

# 14 ಸ್ಥಾನಗಳಲ್ಲಿ 13 ಕೈ ವಶ



■ ವಿಜಯಸಾಕ್ಷಿ ಸುದ್ದಿ, ರೋಣ

ಶಾಸಕ ಜಿ.ಎಸ್. ಪಾಟೀಲರು ವ್ಯಕ್ತಿಯಷ್ಟೇ ಅಲ್ಲ, ಬದಲಾಗಿ ಅವರೊಂದು ಶಕ್ತಿ ಎಂದು ಪಿಎಲ್‌ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಸಂಗಪ್ಪ ಮೆಣಸಿನಕಾಯಿ ಹೇಳಿದರು.

ಅವರು ಬುಧವಾರ ಪಿಎಲ್‌ಡಿ ಬ್ಯಾಂಕ್ ಚುನಾವಣೆಯಲ್ಲಿ ವಿಜೇತರಾದ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ವಿತರಿಸುವ ಸಭೆಯಲ್ಲಿ ಭಾಗಿಯಾಗಿ ಮಾತನಾಡಿದರು.

ರೋಣ ಪಿಎಲ್‌ಡಿ ಬ್ಯಾಂಕ್ ರೈತರ ಪ್ರತಿಷ್ಠಿತ ಬ್ಯಾಂಕ್ ಎನ್ನುವುದರಲ್ಲಿ ಸಂದೇಹವಿಲ್ಲ. ಅಲ್ಲದೆ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಬ್ಯಾಂಕ್ ಜನ್ಮ ತಾಳಿದ ದಿನದಿಂದ ಮತದಾರರು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳಿಗೆ ಹೆಚ್ಚಿನ ಒಲುವು ತೊರುವ ಮೂಲಕ ಆಡಳಿತವನ್ನು ನೀಡಿದ್ದಾರೆ. ಮುಖ್ಯವಾಗಿ ಶಾಸಕ ಜಿ.ಎಸ್. ಪಾಟೀಲ ಅನೇಕ ಯೋಜನೆಗಳನ್ನು ತರುವ ಮುಖೇನ ಅವುಗಳನ್ನು ರೈತರಿಗೆ ತಲುಪಿಸುವಲ್ಲಿ ಪ್ರಾಮಾಣಿಕತೆ ತೋರಿದ್ದರ ಫಲವಾಗಿ ಇಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗಳು ಭರ್ಜರಿ ಗೆಲುವನ್ನು ಸಾಧಿಸಿದ್ದಾರೆ ಎಂದರು.

14 ಸ್ಥಾನಗಳನ್ನು ಹೊಂದಿರುವ ಪಿಎಲ್‌ಡಿ ಬ್ಯಾಂಕ್‌ಗೆ ಕಾಂಗ್ರೆಸ್ ಬೆಂಬಲಿತ 7 ಅಭ್ಯರ್ಥಿಗಳು ಅವಿರೋಧವಾಗಿ ಆಯ್ಕೆಗೊಂಡಿದ್ದರು. ಇನ್ನು 7 ಕ್ಷೇತ್ರಗಳಿಗೆ ಜ.5ರಂದು ಚುನಾವಣೆ ನಿಗದಿಯಾಗಿತ್ತು. ಅಲ್ಲದೆ ಚುನಾವಣೆ ನಂತರ ಮತಗಳ ಎಣಿಕೆ ಕಾರ್ಯ ನಡೆದಿತ್ತು. ಆದರೆ ನ್ಯಾಯಲಯದಲ್ಲಿ ಪ್ರಕರಣವಿದ್ದ ಕಾರಣ ವಿಜೇತ ಅಭ್ಯರ್ಥಿಗಳ ಘೋಷಣೆ ಮಾಡಿರಲಿಲ್ಲ. ಹೀಗಾಗಿ ಎಣಿಕೆಯಲ್ಲಿ ಮುಂದಿದ್ದ ಅಭ್ಯರ್ಥಿಗಳು ವಿಜಯೋತ್ಸವ ಆಚರಿಸಿದ್ದರು.

ಆದರೆ 7 ಕ್ಷೇತ್ರಗಳ ಪೈಕಿ 6 ಕ್ಷೇತ್ರಗಳ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ನಿಡಲಾಗಿದ್ದು, ಸವಡಿ ಕ್ಷೇತ್ರದ ಪ್ರಕರಣ ಮಾತ್ರ ನ್ಯಾಯಲಯದಲ್ಲಿದೆ ಎಂದು ಅಧಿಕಾರಿಗಳು ತಿಳಿಸಿದರು. ಮುಖಂಡರಾದ ವಿ.ಆರ್. ಗುಡಿಸಾಗರ, ಸದಸ್ಯರಾದ ಬಸವರಾಜ ನವಲಗುಂದ, ಶೇಖರಪ್ಪ ಅಬ್ಬಿಗೇರಿ, ಎಪಿಎಂಸಿ ಮಾಜಿ ಅಧ್ಯಕ್ಷ ಪರಶುರಾಮ ಅಳಗವಾಡಿ, ಕಾಶೀಮಸಾಬ ಪಿಂಜಾರ್, ಪಸಾರದ ಸೇರಿದಂತೆ ಹೊಸಳ್ಳಿ ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

# ಸಿರಸಂಗಿ ದೇಸಾಯಿಯವರ ಜಯಂತ್ಯುತ್ಸವ

■ ವಿಜಯಸಾಕ್ಷಿ ಸುದ್ದಿ, ಗದಗ

ದಾನವೀರ ಶ್ರೀ ಲಿಂಗರಾಜ ದೇಸಾಯಿಯವರ 164ನೇ ಜಯಂತ್ಯುತ್ಸವ ಕಾರ್ಯಕ್ರಮವನ್ನು ಜ.10ರ ಮುಂಜಾನೆ 10 ಗಂಟೆಗೆ ಅಖಿಲ ಭಾರತ ಲಿಂಗಾಯತ ಕುಡುವಕ್ಕಲಿಗ ಮಹಾಸಭಾ ಅಡಿಯಲ್ಲಿ ವಿಜಯನಗರ ಜಿಲ್ಲೆಯ ಹೊಸಪೇಟೆ ನಗರದ ಸಾಯಿಬಾಬಾ ಸರ್ಕಲ್ ಹತ್ತಿರವಿರುವ ಶ್ರೀ ಸಾಯಿಲೀಲಾ ರಂಗ ಮಂದಿರದಲ್ಲಿ ಆಯೋಜಿಸಲಾಗಿದೆ.

ಲಿಂಗರಾಜರ ಅಭಿಮಾನಿಗಳು, ಕುಡುವಕ್ಕಲಿಗ ಸಮಾಜ ಬಾಂಧವರು, ಯುವಕರು, ಗದಗ ಜಿಲ್ಲಾ ಪದಾಧಿಕಾರಿಗಳು, ಕಾರ್ಯಕ್ರಮದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕೆಂದು ಅಖಿಲ ಕರ್ನಾಟಕ ಲಿಂಗಾಯತ ಕುಡುವಕ್ಕಲಿಗ ಸಂಘದ ಗದಗ ಜಿಲ್ಲಾಧ್ಯಕ್ಷರಾದ ಸಿದ್ಧರಾಮಪ್ಪ ಬ.ಗೋಜನೂರ ವಿನಂತಿಸಿದ್ದಾರೆ.

# ಮೆಣಸಿನಕಾಯಿ ಬೆಲೆ ಕುಸಿತ: ಆತಂಕದಲ್ಲಿ ರೈತರ



■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮೊದಮೊದಲು ಮುಂಗಾರು ಮಳೆ ಕೊರತೆಯಿಂದ ಮೆಣಸಿನಕಾಯಿ ಬೆಳೆ ಕುಂಠಿತಗೊಂಡಿದ್ದು, ಈ ಬೆಳೆಯು ಮುಂಗಾರು ಹಾಗೂ ಹಿಂಗಾರು ಹಂಗಾಮಿನ ಮಧ್ಯ ಬರುವುದರಿಂದ ಹಿಂಗಾರು ಹಂಗಾಮಿನಲ್ಲಿ ಸುರಿದ ಅಕಾಲಿಕ ಮಳೆಯಿಂದ ರೋಗಕ್ಕೆ ತುತ್ತಾಗಿ ಕೊಳೆತು ಹೋಗಿದೆ. ಅಳಿದುಳಿದ ಬೆಳಗೆ ಸದ್ಯ ಮಾರುಕಟ್ಟೆಯಲ್ಲಿ ಉತ್ತಮ ಬೆಲೆ ಸಿಗದೇ ರೈತರು ಆತಂಕದಲ್ಲಿದ್ದಾರೆ.

ಗದಗ ತಾಲೂಕಿನ ತಿಮ್ಮಾಪೂರ, ಹರ್ಲಾಪೂರ, ಲಕ್ಕುಂಡಿ, ಕೋಟುಉಮಚಗಿ, ಹಾತಲಗೇರಿ, ಕಣಗಿನಹಾಳ ಗ್ರಾಮಗಳಲ್ಲಿ ಅತಿ ಹೆಚ್ಚು ಎರೆಭೂಮಿಯನ್ನು ಹೊಂದಿರುವುದರಿಂದ ಇಲ್ಲಿ ಅಧಿಕ ಪ್ರಮಾಣದಲ್ಲಿ ಮೆಣಸಿನಕಾಯಿ ಬೆಳೆಯನ್ನು ಬೆಳೆದಿದ್ದಾರೆ. ಅಳಿದುಳಿದಿರುವ ಮೆಣಸಿನಕಾಯಿಯನ್ನು ಬ್ಯಾಡಗಿ, ಹುಬ್ಬಳ್ಳಿ, ಗದಗ ಮಾರುಕಟ್ಟೆಗೆ ಒಯ್ದಾಗ ಕ್ವಿಂಟಲ್‌ಗೆ 20 ಸಾವಿರ ರೂ.ನಿಂದ 25 ಸಾವಿರ ರೂ.ವರೆಗೆ ಮಾತ್ರ ದರ ಇದೆ. ಕಳೆದ ವರ್ಷ ಗರಿಷ್ಠ 75 ಸಾವಿರ ರೂ/ಕ್ವಿಂಟಲ್‌ಗೆ ಮಾರಾಟವಾಗಿತ್ತು.

ಜಿಲ್ಲಾಡಳಿತ ಈ ಹಿಂದೆ ತೋಟಗಾರಿಕಾ ಇಲಾಖೆ, ಕಂದಾಯ ಇಲಾಖೆ ಮತ್ತು ಕೃಷಿ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಬೆಳೆ ಹಾನಿ ಸರ್ವೆ ಮಾಡಿಸಿಕೊಂಡು ವರದಿಯನ್ನು ಪಡೆದರೂ ಸಹ ರೈತರಿಗೆ ಯಾವುದೇ ಬೆಳೆ ಹಾನಿ ಪರಿಹಾರ ಸಿಕ್ಕಿಲ್ಲ ಎಂಬುದು ರೈತರ ಅಳಲು.

ಪೂರ್ಣ ಪ್ರಮಾಣದ ಪರಿಹಾರದ ಹಣವನ್ನು ಹಾಗೂ ಬೆಳೆ ವಿಮೆ ಹಣವನ್ನು ರೈತರ ಬ್ಯಾಂಕ್ ಖಾತೆಗೆ ಶೀಘ್ರವೇ ಜಮಾ ಮಾಡಬೇಕೆಂದು ರೈತ ಸಂಘದ ಗದಗ ಜಿಲ್ಲಾಧ್ಯಕ್ಷ ಯಲ್ಲಪ್ಪ ಎಚ್.ಬಾಬರಿ ಆಗ್ರಹಿಸಿದ್ದಾರೆ.

ಶ್ರೀ ರಾಚೋಟೇಶ್ವರ ಮಠದ ಶ್ರೀ ಸಿದ್ಧರಾಮೇಶ್ವರ 12ನೇ ವರ್ಷದ ಜಾತ್ರಾ ಮಹೋತ್ಸವ

# ಜಾತ್ರಾ ಮಹೋತ್ಸವದಿಂದ ಸಾಮರಸ್ಯ ವೃದ್ಧಿ

■ ವಿಜಯಸಾಕ್ಷಿ ಸುದ್ದಿ, ಭಾಲ್ಕಿ

ಧರ್ಮ ಮತ್ತು ದೇಶ ಮನುಷ್ಯನ ಎರಡು ಕಣ್ಣು. ಭಾರತೀಯ ಸಂಸ್ಕೃತಿಯಲ್ಲಿ ಸಂಸ್ಕೃತಿ ಮತ್ತು ಪರಂಪರೆ ಅತ್ಯಂತ ಪಾವಿತ್ರ್ಯತೆಯನ್ನು ಹೊಂದಿದೆ. ಮಾನವೀಯ ಆದರ್ಶ ಮೌಲ್ಯಗಳ ಮೂಲಕ ಸಮಾಜದಲ್ಲಿ ಸೌಹಾರ್ದತೆ ಬೆಳೆಸುವ ಅವಶ್ಯಕತೆಯಿದೆ. ನಾಡಿನ ನಾನಾ ಭಾಗಗಳಲ್ಲಿ ಜರುಗುವ ಜಾತ್ರಾ ಮಹೋತ್ಸವದ ಗುರಿ ಸಾಮರಸ್ಯ ಸದ್ಭಾವನೆ ಬೆಳೆಸುವುದಾಗಿದೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ತಾಲೂಕಿನ ಹಲಬರ್ಗಾ ಶ್ರೀ ರಾಚೋಟೇಶ್ವರ ಮಠದ ಶ್ರೀ ಸಿದ್ಧರಾಮೇಶ್ವರ 12ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಮಠಾಧ್ಯಕ್ಷರಾದ ಹಾವಗಿ ಲಿಂಗೇಶ್ವರ ಶಿವಾಚಾರ್ಯ ಸ್ವಾಮಿಗಳವರ ಪಟ್ಟಾಧಿಕಾರದ ದ್ವಾದಶ ವರ್ಧಂತಿ ಮಹೋತ್ಸವ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭಾವೈಕ್ಯತೆ ಮತ್ತು ಆಧ್ಯಾತ್ಮ ಜ್ಞಾನ ಭಾರತದ ಉಸಿರಾಗಿದೆ. ಹಲವು ಧರ್ಮ-ಹಲವು ಆಚರಣೆ ಇದ್ದರೂ ಅವೆಲ್ಲವುಗಳ ಗುರಿ ಮಾನವ ಕಲ್ಯಾಣವೇ ಆಗಿದೆ. ದೇಶ



ಉಳಿದರೆ ಧರ್ಮ ಉಳಿಯಲು ಸಾಧ್ಯ. ಜಾತಿ-ಜನಾಂಗಗಳ ಗಡಿ ಮೀರಿ ಮಾನವೀಯ ತತ್ವ ತಳಹದಿಯ ಮೇಲೆ ಆರೋಗ್ಯ ಪೂರ್ಣ ಸಮಾಜ ನಿರ್ಮಾಣಗೊಳ್ಳಬೇಕೆಂಬುದು ಶ್ರೀ ಜಗದ್ಗುರು ರೇಣುಕಾಚಾರ್ಯರ ಹಾಗೂ ಭಕ್ತಿ ಭಂಡಾರಿ ಬಸವಣ್ಣನವರ ಆದರ್ಶ ಗುರಿಯಾಗಿತ್ತು. ಆ ದಿಶೆಯಲ್ಲಿ ಎಲ್ಲರೂ ಮುನ್ನಡೆದು ಸಮಾಜದಲ್ಲಿ ಶಾಂತಿ ಸಮಾಧಾನ ಬೆಳೆಯಲು ಶ್ರಮಿಸಬೇಕಾಗಿದೆ.

ನೇತೃತ್ವ ವಹಿಸಿದ ಹಾವಗಿ ಲಿಂಗೇಶ್ವರ ಶ್ರೀಗಳು ಮಾತನಾಡಿ, ಕಲ್ಯಾಣ ಕರ್ನಾಟಕ ಭಾಗದ ಭಕ್ತರ ಭಾಗ್ಯ ಬಹಳ ದೊಡ್ಡದಿದೆ. ಶ್ರೀ ರಂಭಾಪುರಿ ಜಗದ್ಗುರುಗಳು ದಯಮಾಡಿಸಿ 12ನೇ ಜಾತ್ರಾ ಮಹೋತ್ಸವ ಹಾಗೂ ನಮ್ಮ ಪಟ್ಟಾಧಿಕಾರದ 12ನೇ ವರ್ಷದ ವರ್ಧಂತಿಯಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವದಿಸುತ್ತಿರುವುದು ಪೂರ್ವಾರ್ಜಿತ ಪುಣ್ಯದ ಫಲವೆಂದು ಭಾವಿಸುತ್ತೇವೆ. ವೀರಶೈವ ಧರ್ಮ ಸಕಲ ಜೀವಾತ್ಮರಿಗೆ ಸದಾಕಾಲ ಒಳ್ಳೆಯದನ್ನೇ ಮಾಡುತ್ತಾ ಬಂದಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವ ಸಿದ್ಧಾಂತ ಮತ್ತು 12ನೇ ಶತಮಾನದ ಶರಣರ ಸಾಮಾಜಿಕ ಚಿಂತನಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿದೀಪ ಎಂದರು.

ಹಾವಗಿ ಲಿಂಗೇಶ್ವರ ಶಿವಾಚಾರ್ಯ ಸ್ವಾಮಿಗಳು ಕಳೆದ 12 ವರುಷಗಳಲ್ಲಿ ಧರ್ಮ ಸಂಸ್ಕೃತಿ ಬೆಳೆಸುವ ಮತ್ತು ಸಂಸ್ಕಾರ ಸದ್ವಿಚಾರ ಬೆಳೆಸುವುದರ ಮೂಲಕ ಒಳ್ಳೆಯ ವಾತಾವರಣ ನಿರ್ಮಾಣ ಮಾಡಿದ ಶ್ರೇಯಸ್ಸು ಶ್ರೀಗಳವರಿಗೆ ಸಲ್ಲುತ್ತದೆ. ಶ್ರೀಗಳವರ ಆದರ್ಶ ದಾರಿಯಲ್ಲಿ ಭಕ್ತ ಸಮುದಾಯ ಮುನ್ನಡೆದು ಸದೃಢ ಸಶಕ್ತ ದೇಶ ಮತ್ತು ಧರ್ಮವನ್ನು ಕಟ್ಟಿ ಬೆಳೆಸುವಂತಾಗಲೆಂದು ಹಾರೈಸಿ ಶ್ರೀಗಳವರಿಗೆ ಆಶೀರ್ವದಿಸಿದರು.

ಮೇಹಕರ ರಾಜೇಶ್ವರ ಶಿವಾಚಾರ್ಯರು ಧರ್ಮ ಸಮಾರಂಭವನ್ನು ಉದ್ಘಾಟಿಸಿದರು. ಸಮಾರಂಭದಲ್ಲಿ ಹುಡುಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು, ಹಣೆಗಾಂವ ಶಂಕರಲಿಂಗ ಶಿವಾಚಾರ್ಯರು, ಕೌಳಾಸ ಶಿವಾಚಾರ್ಯರು ಉಪಸ್ಥಿತರಿದ್ದರು. ಶಾಂತಕುಮಾರ ಪ್ರಭಾ, ಮಲ್ಲಿಕಾರ್ಜುನ ಚಲುವಾ, ವೀರಶೆಟ್ಟಿ ಪಾಟೀಲ, ರಮೇಶ ಪ್ರಭಾರ, ಉಮಾಕಾಂತ ಪ್ರಭಾ ಸೇರಿದಂತೆ ಹಲವಾರು ಗಣ್ಯರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರುರಕ್ಷೆ ಸ್ವೀಕರಿಸಿದರು.

ಸಮಾರಂಭಕ್ಕೂ ಮುನ್ನ ದ್ವಾದಶ ವರ್ಧಂತಿ ನಿಮಿತ್ಯ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಹಾವಗಿ ಲಿಂಗೇಶ್ವರ ಶಿವಾಚಾರ್ಯ ಸ್ವಾಮಿಗಳಿಗೆ ಶಾಸ್ತ್ರೋಕ್ತವಾಗಿ ಮಂಗಲ ಸ್ನಾನ ಮಾಡಿಸಿ ನೂತನಾಂಬರವನ್ನು ಭಕ್ತರು ಸಮರ್ಪಿಸಿದರು.

ಧಾರವಾಡ ಜಿಲ್ಲಾ ಆಸ್ಪತ್ರೆಯ ವಿವಿಧ ವಿಭಾಗಗಳಿಗೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಭೇಟಿ

# ಔಷಧೋಪಚಾರದಲ್ಲಿ ಕೊರತೆಯಾಗದಂತೆ ಮುನ್ನೆಚ್ಚರಿಕೆ ವಹಿಸಿ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಆಸ್ಪತ್ರೆಗಳಿಗೆ ಬರುವ ರೋಗಿಗಳಿಗೆ ಉತ್ತಮ ಚಿಕಿತ್ಸೆ, ಉಚಿತ ಔಷಧೋಪಚಾರ ನೀಡಬೇಕು. ಗರ್ಭಿಣಿಯರಿಗೆ, ಬಾಣಂತಿಯರಿಗೆ ಮತ್ತು ನವಜಾತ ಶಿಶುಗಳಿಗೆ ಸಕಾಲಕ್ಕೆ ಅಗತ್ಯ ಚಿಕಿತ್ಸೆ, ಔಷಧಿ ನೀಡಿ, ಯಾವುದೇ ಸಾವು-ನೋವು ಆಗದಂತೆ ವೈದ್ಯರು ಮುನ್ನೆಚ್ಚರಿಕೆ ವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ತಿಳಿಸಿದರು.

ಅವರು ಧಾರವಾಡ ಜಿಲ್ಲಾ ಆಸ್ಪತ್ರೆಯ ವಿವಿಧ ವಿಭಾಗಗಳಿಗೆ, ತಾಯಿ-ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ ಮಾತನಾಡಿದರು.

ಜಿಲ್ಲಾ ಆಸ್ಪತ್ರೆಯ ಹೊರ ರೋಗಿಗಳ ಚಿಕಿತ್ಸಾ ವಿಭಾಗ, ಶಸ್ತ್ರ ಚಿಕಿತ್ಸಾ ವಿಭಾಗ, ಹೆರಿಗೆ ವಿಭಾಗ, ತಾಯಿ-ಮಕ್ಕಳ ಆಸ್ಪತ್ರೆ, ರೋಗಿ ಪಾಲಕರ ವಿಶ್ರಾಂತಿ ಸ್ಥಳಗಳಿಗೆ ಭೇಟಿ ನೀಡಿ, ಚಿಕಿತ್ಸೆಗೆ ಆಗಮಿಸಿದ್ದ ರೋಗಿಗಳನ್ನು, ಪಾಲಕರನ್ನು ಮಾತನಾಡಿಸಿ, ಜಿಲ್ಲಾ ಆಸ್ಪತ್ರೆ ವೈದ್ಯರ ಸ್ಪಂದನೆ, ಚಿಕಿತ್ಸೆಗಳ ಬಗ್ಗೆ ಮಾಹಿತಿ ಪಡೆದರು. ಜಿಲ್ಲಾ ಆಸ್ಪತ್ರೆಯ ಕಾರ್ಯನಿರ್ವಹಣೆ ಬಗ್ಗೆ ಸಾರ್ವಜನಿಕರಿಂದ ಅಭಿಪ್ರಾಯ ಪಡೆದುಕೊಂಡರು.

ಶೌಚಾಲಯಗಳಿಗೆ ಭೇಟಿ ನೀಡಿ, ನೀರು, ನೈರ್ಮಲ್ಯ ಕಾಪಾಡುವಂತೆ ಮತ್ತು ಶೌಚಾಲಯಗಳನ್ನು ನಿರಂತರವಾಗಿ ಸ್ವಚ್ಛಗೊಳಿಸುವಂತೆ ಅವರು ತಿಳಿಸಿದರು. ಚಿಕಿತ್ಸೆಗೆ ಆಗಮಿಸುವ ರೋಗಿಗಳಿಂದ ಅಥವಾ ರೋಗಿಗಳ ಸಂಬಂಧಿಕರಿಂದ ಯಾವುದೇ ಹಣ, ಇತರೆ ವಸ್ತುಗಳನ್ನು ಪಡೆಯುತ್ತಾರೆಯೇ ಮತ್ತು ರೋಗಿಗಳಿಗೆ ಹೊರಗಿನ ಔಷಧಿಗಳನ್ನು ಸೂಚಿಸುತ್ತಾರೆಯೇ ಎಂದು ಪ್ರಶ್ನಿಸಿ ಸಾರ್ವಜನಿಕರಿಂದ ಮಾಹಿತಿ ಪಡೆದುಕೊಂಡರು. ಸಾರ್ವಜನಿಕರು



ಅಂತಹ ಯಾವುದೇ ಘಟನೆಗಳು ನಡೆದಿರುವುದಿಲ್ಲ. ಆಸ್ಪತ್ರೆಯಲ್ಲಿ ಲಭ್ಯವಿರುವ ಔಷಧಿಯನ್ನು ನೀಡುತ್ತಾರೆ. ಚಿಕಿತ್ಸೆ ನೀಡುವಲ್ಲಿ ಯಾವುದೇ ರೀತಿಯ ವಿಳಂಬ, ತೊಂದರೆ ಇರುವುದಿಲ್ಲ ಎಂದು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

ನಂತರ ಅವರು ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿ, ಜಿಲ್ಲಾ ಆಸ್ಪತ್ರೆಯಲ್ಲಿ ರೋಗಿಗಳ ಚಿಕಿತ್ಸೆಗಾಗಿ 250 ಹಾಸಿಗೆ ಹಾಗೂ ತಾಯಿ-ಮಕ್ಕಳ ಆಸ್ಪತ್ರೆಯ 100 ಹಾಸಿಗೆ ಸೇರಿ ಒಟ್ಟು 350 ಬೆಡ್ ವ್ಯವಸ್ಥೆ ಇದೆ. ಪ್ರತಿದಿನ ಸುಮಾರು 1,100ದಿಂದ 1,700ರಷ್ಟು ಹೊರರೋಗಿಗಳು ನೋಂದಣಿ ಮಾಡಿಕೊಳ್ಳುತ್ತಾರೆ. ಅಂದಾಜು ಪ್ರತಿದಿನ 150 ಜನರಿಗೆ ಎಕ್ಸರೇ, 35 ಜನರಿಗೆ ಓ.ಬಿ.ಜಿ ಸ್ಕ್ಯಾನ್, 80 ಜನರಿಗೆ ಜನರಲ್ ಸ್ಕ್ಯಾನ್, 25 ಜನರಿಗೆ ಸಿಟಿ ಸ್ಕ್ಯಾನ್ ಮಾಡಲಾಗುತ್ತದೆ. ಪ್ರತಿ ತಿಂಗಳು ಸರಾಸರಿ 450ಕ್ಕೂ ಹೆಚ್ಚು ಹೆರಿಗೆ ಆಗುತ್ತವೆ. 400ಕ್ಕೂ ಹೆಚ್ಚು ಜನರು ಶಸ್ತ್ರಚಿಕಿತ್ಸೆಗೆ ಒಳಪಡುತ್ತಾರೆ. ಆಯುಷ್ಮಾನ್ ಭಾರತ, ಪ್ರಧಾನ ಮಂತ್ರಿ ಜನಾರೋಗ್ಯ ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ಶೇ. 89ರಷ್ಟು ಚಿಕಿತ್ಸಾ ಪೂರ್ವ ದೃಢೀಕರಣದಿಂದ ಆರ್ಥಿಕ ಸೌಲಭ್ಯ ಪಡೆಯಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಎಚ್.ಎಂ.ಪಿ.ವಿ ಪ್ರಕರಣಗಳ ನಿರ್ವಹಣೆಗೆ, ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜಿಲ್ಲೆಯಲ್ಲಿ ಇದುವರೆಗೆ ಯಾವುದೇ ಪ್ರಕರಣಗಳು ವರದಿಯಾಗಿಲ್ಲ. ಅಗತ್ಯ ಬಿದ್ದರೆ ಚಿಕಿತ್ಸೆಗಾಗಿ 10 ಬೆಡ್ ಮೀಸಲಿಡಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ಗರ್ಭಿಣಿಯರ ಸಾವಿನ ಪ್ರಮಾಣ ಕಡಿಮೆ ಇದೆ. ಈಗ ಆಗುತ್ತಿರುವ ಸಾವುಗಳನ್ನು ನಿಯಂತ್ರಿಸಲು ಸೂಕ್ತ ಮುಂಜಾಗ್ರತವಹಿಸಲಾಗುತ್ತಿದೆ. ಧಾರವಾಡ ಜಿಲ್ಲೆಗೆ ನೆರೆಯ ಉತ್ತರಕನ್ನಡ, ಬೆಳಗಾವಿ, ಬಾಗಲಕೋಟ, ಗದಗ ಮತ್ತು ಹಾವೇರಿ ಜಿಲ್ಲೆಯ ರೋಗಿಗಳು, ಗರ್ಭಿಣಿಯರು ಆಗಮಿಸಿ ಚಿಕಿತ್ಸೆ ಪಡೆಯುತ್ತಾರೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.

ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಜಿಲ್ಲಾ ಆರೋಗ್ಯಧಿಕಾರಿ ಡಾ. ಶಶಿ ಪಾಟೀಲ, ಜಿಲ್ಲಾ ಆರ್.ಸಿ.ಎಚ್ ಅಧಿಕಾರಿ ಡಾ. ಸುಜಾತ ಹಸವೀಮಠ ಅವರು ಜಿಲ್ಲಾಧಿಕಾರಿಗಳ ಭೇಟಿ ಸ್ಥಳದಲ್ಲಿ ಹಾಜರಿದ್ದು, ಅಗತ್ಯ ಮಾಹಿತಿ, ವಿವರಣೆ ನೀಡಿದರು.



ಜ.30ರಿಂದ ಶ್ರೀ ವೀರಪ್ಪಜ್ಜನವರ ಪುರಾಣ ಪ್ರವಚನ ಪ್ರಾರಂಭಿಸಲು ಸಭೆಯಲ್ಲಿ ತೀರ್ಮಾನ

# ವೀರಪ್ಪಜ್ಜನವರ ಪುಣ್ಯಾರಾಧನಾ ಶತಮಾನೋತ್ಸವ ಫೆ. 5ಕ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಲ್ಲಿನ ಕೋಡಿಕೊಪ್ಪದ ಶ್ರೀ ಹುಚ್ಚೀರೇಶ್ವರರ ಪುಣ್ಯಾರಾಧನಾ ಶತಮಾನೋತ್ಸವವನ್ನು ಫೆಬ್ರುವರಿ 5ರಂದು ಆಚರಿಸಲು ಭಕ್ತರ ಸಭೆಯಲ್ಲಿ ತೀರ್ಮಾನಿಸಲಾಯಿತು. ಇದಕ್ಕೆ ಪೂರಕವಾಗಿ ಜ.30ರಿಂದ ಶ್ರೀ ವೀರಪ್ಪಜ್ಜನವರ ಪುರಾಣವನ್ನು ಪ್ರಾರಂಭಿಸಲು ಸಭೆ ತೀರ್ಮಾನಿಸಿತು.

ಪುರಾಣದ ಉದ್ಘಾಟನೆಯನ್ನು ಮುಂಡರಗಿಯ ಶ್ರೀ ಅನ್ನದಾನೇಶ್ವರ ಮಠದ ನಾಡೋಜ ಶ್ರೀ ಅನ್ನದಾನ ಮಹಾಸ್ವಾಮಿಗಳವರು ನೆರವೇರಿಸಲು, ನಿಡಗುಂದಿಕೊಪ್ಪದ ಶ್ರೀ ಅಭಿನವ ಚನ್ನಬಸವ ಶ್ರೀಗಳು, ಯಲಬುರ್ಗಾದ ಶ್ರೀ ಸಿದ್ಧರಾಮ ಶಿವಾಚಾರ್ಯರ ಉಪಸ್ಥಿತಿಯಲ್ಲಿ ರೋಣ ಬೂದೀಶ್ವರ ಮಠದ ಡಾ. ವಿಶ್ವನಾಥ ಮಹಾಸ್ವಾಮಿಗಳು ಪುರಾಣ ಪ್ರಾರಂಭಿಸಲು ನಿರ್ಧರಿಸಲಾಯಿತು.

ಫೆಬ್ರುವರಿ 5ರಂದು ಮಧ್ಯಾಹ್ನ 3ಕ್ಕೆ ಉದ್ಘಾಟನೆಗೊಳ್ಳಲಿರುವ ಶತಮಾನೋತ್ಸವದ ಸಂದರ್ಭದಲ್ಲಿ ಹಾಲಕೆರೆಯ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಭೈರನಹಟ್ಟಿ ದೊರೆಸ್ವಾಮಿ ಮಠದ ಶಾಂತಲಿಂಗ ಶ್ರೀಗಳು, ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಮತ್ತು ರೋಣ ಶಾಸಕ ಜಿ.ಎಸ್. ಪಾಟೀಲ ಸೇರಿದಂತೆ ಗಣ್ಯರು ಉಪಸ್ಥಿತರಿರುತ್ತಾರೆ.



ಫೆಬ್ರುವರಿ 6ರಂದು 5 ಜೊತೆ ಸಾಮೂಹಿಕ ವಿವಾಹ ಹಮ್ಮಿಕೊಳ್ಳಲಾಗಿದ್ದು, ಅಂದು ನರೇಗಲ್ಲ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ಹಂಪಸಾಗರದ ಶ್ರೀ ರುದ್ರಮುನಿ ಶಿವಲಿಂಗೇಶ್ವರ ಶಿವಾಚಾರ್ಯರು, ಬಳ್ಳಾರಿಯ ಕಲ್ಯಾಣ ಶ್ರೀಗಳು ಮತ್ತು ಬಿಸರಳ್ಳಿಯ ಸಿದ್ದೇಶ್ವರ ಶಿವಾಚಾರ್ಯರು ಉಪಸ್ಥಿತರಿರುತ್ತಾರೆ.

ಫೆಬ್ರುವರಿ 7ರಂದು ಬೆಳಗ್ಗೆ 11ಕ್ಕೆ ಶತಮಾನೋತ್ಸವದ ಮುಕ್ತಾಯ ಸಮಾರಂಭದಲ್ಲಿ ಶಿರಹಟ್ಟಿಯ ಶ್ರೀ ದಿಂಗಾಲೇಶ್ವರ ಶ್ರೀಗಳವರು, ಅಬ್ಬಿಗೇರಿಯ ಶ್ರೀ ವೀರಭದ್ರ ಶಿವಾಚಾರ್ಯರು, ನರೇಗಲ್ಲದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ನಂದಿವೇರಿ ಮಠದ ಶ್ರೀಗಳು, ಸಂಸದ ಬಸವರಾಜ ಬೊಮ್ಮಾಯಿ, ಮಾಜಿ ಸಚಿವರಾದ ಕಳಕಪ್ಪ ಬಂಡಿ, ಹಾಲಪ್ಪ ಆಚಾರ, ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಮುಖಂಡ ರವಿ ದಂಡಿನ ಉಪಸ್ಥಿತರಿರುವರು.

ಅಂದು ಸಂಜೆ ಶ್ರೀ ವೀರಪ್ಪಜ್ಜನವರ ಪುರಾಣಕ್ಕೆ ಮಂಗಲ ಜರುಗಿದ ನಂತರ ಶ್ರೀ ವೀರಪ್ಪಜ್ಜನವರ ಮಹಾ ರಥೋತ್ಸವವನ್ನು ಭಕ್ತರ ಸಮ್ಮುಖದಲ್ಲಿ ಜರುಗಿಸಲು ಸೇರಿದ್ದ ಸಭೆಯು ನಿರ್ಧರಿಸಿತು. ಶಿವನಗೌಡ ಪಾಟೀಲ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಸಭೆಯನ್ನುದ್ದೇಶಿಸಿ ಕರವೇ ಜಿಲ್ಲಾಧ್ಯಕ್ಷ ಹನುಮಂತ ಅಬ್ಬಿಗೇರಿ, ಜೈ ಭೀಮ ಸಂಘಟನೆಯ ರಾಜ್ಯ ಉಪಾಧ್ಯಕ್ಷ ಮೈಲಾರಪ್ಪ ಚಳ್ಳಮರದ, ವೀರಪ್ಪಜ್ಜನರ ಗ್ರಂಥ ಬಿಡುಗಡೆ ಕುರಿತು ನಿವೃತ್ತ ಉಪನ್ಯಾಸಕ ದಿಲೀಪ ಮುಗಳಿ ಮಾತನಾಡಿದರು.

ರೋಣ ಬೂದೀಶ್ವರ ಮಠದ ಡಾ. ವಿಶ್ವನಾಥ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿದ್ದರು. ಡಾ. ಎಂ.ಸಿ. ಚಪ್ಪನ್ನಮಠ ಅಧ್ಯಕ್ಷತೆ ವಹಿಸಿದ್ದರು. ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಅತಿಥಿಗಳಾಗಿದ್ದರು. ಬಸವರಾಜ ಜಾಲೀಹಾಳ ಸ್ವಾಗತಿಸಿದರು. ಡಾ. ಎಲ್.ಎಸ್. ಗೌರಿ ನಿರೂಪಿಸಿದರು. ಉಪಾಧ್ಯಕ್ಷ ಕೆ.ಎಸ್. ಕೋರಧಾನ್ಯಮಠ ವಂದಿಸಿದರು.

ಪುರಾಣದ ಸಂದರ್ಭದಲ್ಲಿ ನಾಡಿನ ಅನೇಕ ಹರ-ಗುರು-ಚರ ಮೂರ್ತಿಗಳು ಉಪಸ್ಥಿತರಿದ್ದು, ಭಕ್ತರನ್ನು ಆಶೀರ್ವದಿಸಲಿದ್ದಾರೆ. ಕುಷ್ಟಗಿಯ ವೀರಭದ್ರ ಶಿವಾಚಾರ್ಯರು, ಯಲಬುರ್ಗಾದ ಮುರಡಿ ಹಿರೇಮಠದ ಬಸವಲಿಂಗ ಸ್ವಾಮಿಗಳು, ರೋಣ ಗುಲಗಂಜಿ ಮಠದ ಗುರುಪಾದ ದೇವರು, ಕೊತಬಾಳ ಅಂಕಲಿಮಠದ ಶ್ರೀಗಳು, ಸಿದ್ಧನಕೊಳ್ಳದ ಧರ್ಮಾಧಿಕಾರಿ ಡಾ. ಶಿವಕುಮಾರ ಸ್ವಾಮಿಗಳು, ಕುಕನೂರಿನ ಮಹಾದೇವ ಸ್ವಾಮಿಗಳು, ಅಳವಂಡಿಯ ಮರುಳಾರಾಧ್ಯರನ್ನು ಆಮಂತ್ರಿಸಲು ನಿರ್ಧರಿಸಲಾಯಿತು.

# ಜಾತ್ರಾ ಮಹೋತ್ಸವದ ನಿಮಿತ್ತ ರಕ್ತದಾನ ಶಿಬಿರ

■ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಶ್ರೀ ಗವಿಸಿದ್ಧೇಶ್ವರ ಜಾತ್ರಾ ಮಹೋತ್ಸವದಲ್ಲಿ ಜ. 15ರಿಂದ 18ರವರೆಗೆ 4 ದಿನಗಳ ಕಾಲ ಶ್ರೀ ಜಗದ್ಗುರು ಗವಿಸಿದ್ಧೇಶ್ವರ ಆಯುರ್ವೇದಿಕ್ ಮಹಾವಿದ್ಯಾಲಯ ಹಾಗೂ ಭಾರತೀಯ ರೆಡ್‌ಕ್ರಾಸ್ ಸಂಸ್ಥೆಯ ಜಿಲ್ಲಾ ಘಟಕ ಕೊಪ್ಪಳ ಇವರುಗಳ ಸಹಯೋಗದೊಂದಿಗೆ 'ಬೃಹತ್ ರಕ್ತದಾನ ಶಿಬಿರ'ವನ್ನು ಬೆಳಗ್ಗೆ 9 ಗಂಟೆಯಿಂದ ಸಾಯಂಕಾಲ 5 ಗಂಟೆಯವರೆಗೆ ಹಮ್ಮಿಕೊಳ್ಳಲಾಗಿದೆ. ಸದರಿ ರಕ್ತದಾನ ಶಿಬಿರದಲ್ಲಿ 1400-1800 ಜನ ರಕ್ತದಾನಿಗಳು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡುವ ನಿರೀಕ್ಷೆಯಿದೆ.

ಶಿಬಿರಕ್ಕೆ 15 ವೈದ್ಯರ ತಂಡ, 15 ಜನ ಪ್ರಯೋಗಶಾಲಾ ತಂತ್ರಜ್ಞರ ತಂಡ, 20 ಜನ ಸ್ವಯಂ ಸೇವಕರ ತಂಡ ಹಾಗೂ 50 ಬೆಡ್‌ಗಳ ವ್ಯವಸ್ಥೆಯನ್ನು ಮಾಡಿಕೊಳ್ಳಲಾಗಿದೆ. 2015ರಿಂದ 2024ರವರೆಗೆ ಒಟ್ಟೂ 1111 ರಕ್ತದಾನ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿತ್ತು. ಇದರ ಪರಿಣಾಮವಾಗಿ ನವೆಂಬರ್ 2024ರವರೆಗೆ 83452 ಯುನಿಟ್ ರಕ್ತ ಸಂಗ್ರಹವಾಗಿ ಸಾವಿರಾರು ಜನರ ಜೀವ ರಕ್ಷಣೆಗೆ ಸಹಾಯಕವಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ರಕ್ತದಾನ ಬೇಡಿಕೆಗೆ ಶಿಬಿರದ ಕಾರ್ಯ ಗಣನೀಯವಾಗಿದೆ.

ಹೆಚ್ಚಿನ ಮಾಹಿತಿಗಾಗಿ-9008996646, 9448814156 ಸಂಪರ್ಕಿಸಲು ಗವಿಮಠದ ಪ್ರಕಟಣೆ ತಿಳಿಸಿದೆ.

ವಿಜಯಪುರದ ಶ್ರೀ ಜಯದೇವ ಜಗದ್ಗುರುಗಳ ಪ್ರಣವ ಮಂಟಪ(ಗದ್ದುಗೆ) ಲೋಕಾರ್ಪಣೆ

# 8ನೇ ಪುಣ್ಯತಿಥಿ ಸಮಾರಂಭ ಜ 12ಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಪುರ ಜಿಲ್ಲೆಯ ಜಿ.ಪಂ ಹತ್ತಿರದ ವನಶ್ರೀ ಸಂಸ್ಥಾನಮಠದಲ್ಲಿ ಪರಮಪೂಜ್ಯ ಶ್ರೀ ಜಯದೇವ ಜಗದ್ಗುರುಗಳ ಪ್ರಣವ ಮಂಟಪ(ಗದ್ದುಗೆ) ಲೋಕಾರ್ಪಣೆ ಹಾಗೂ 8ನೇ ಪುಣ್ಯತಿಥಿ ಸಮಾರಂಭ ಜನವರಿ 12ರಂದು ಮಧ್ಯಾಹ್ನ 12ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಅಖಿಲ ಭಾರತ ಗಾಣಿಗ ವಿದ್ಯಾವರ್ಧಕ ಟ್ರಸ್ಟ್‌ನ ಕಟ್ಟಡ ಸಮಿತಿ ಸದಸ್ಯ ಅಶೋಕ ಮಂದಾಲಿ ತಿಳಿಸಿದ್ದಾರೆ.

ವಿಜಯಪುರ ವನಶ್ರೀ ಸಂಸ್ಥಾನಮಠದ ಡ. ಜಯಬಸವಕುಮಾರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಜ್ಞಾನಯೋಗಾಶ್ರಮದ ಶ್ರೀ ಬಸವಲಿಂಗ ಮಹಾಸ್ವಾಮಿಗಳು, ಯರಹೊಸಳ್ಳಿ ರೆಡ್ಡಿ ಗುರುಪೀಠದ ಶ್ರೀ ಹೇಮ-ವೇಮ ಮಹಾಸ್ವಾಮಿಗಳು, ಕೂಡಲಸಂಗಮ ಪಂಚಮಸಾಲಿ ಗುರುಪೀಠದ ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳು, ಚಿತ್ತರಗಿ-ಇಲಕಲ್ ಶ್ರೀ ಗುರುಮಹಾಂತ ಮಹಾಸ್ವಾಮಿಗಳು, ಹಿರೇರೂಗಿ ಮುಕ್ತಿಮಂದಿರದ ಶಿವಯೋಗಿನಿ ಮಾತೋಶ್ರೀ ಸುಗಲಾದೇವಿ, ಆಲೂರು-ಕಳಕಾಪೂರದ ಶ್ರೀ



ಶಂಕರಾನಂದ ಮಹಾಸ್ವಾಮಿಗಳು, ಶ್ರೀ ಸೋಮೇಶ್ವರ ಮಹಾಸ್ವಾಮಿಗಳು ಪಾಲ್ಗೊಳ್ಳುವರು. ಜಗದ್ಗುರು ಶ್ರೀ ಜಯದೇವ ಶಿವಯೋಗೇಶ್ವರ ಟ್ರಸ್ಟ್‌ನ ಅಧ್ಯಕ್ಷರಾದ ಸಿದ್ದಮುತ್ಯಾ ಅಧ್ಯಕ್ಷತೆ ವಹಿಸುವರು.

ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ ಹಾಗೂ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಪಾಟೀಲ ಅವರು ಗುರುಭವನದ ಅಡಿಗಲ್ಲು ಸಮಾರಂಭಕ್ಕೆ ಚಾಲನೆ ನೀಡುವರು. ಮಾಜಿ ಮುಖ್ಯಮಂತ್ರಿಗಳು, ಅಥಣಿ ವಿಧಾನಸಭಾ ಕ್ಷೇತ್ರದ ಶಾಸಕ ಲಕ್ಷ್ಮಣ ಸವದಿ ಹಾಗೂ ವಿಜಯಪುರ ನಗರ ವಿಧಾನಸಭಾ ಕ್ಷೇತ್ರದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಪರಮ ಪೂಜ್ಯ ಜಯದೇವ ಜಗದ್ಗುರು ವೃತ್ತವನ್ನು ಅನಾವರಣಗೊಳಿಸುವರು.

ವಿಜಯಪುರ ಲೋಕಸಭೆ ಕ್ಷೇತ್ರದ ಸಂಸದ ರಮೇಶ ಜಿಗಜಿಣಗಿ, ಬಾಗಲಕೋಟೆ ಲೋಕಸಭೆ ಕ್ಷೇತ್ರದ ಸಂಸದ ಪಿ.ಸಿ. ಗದ್ದಿಗೌಡ್ರ ಧಾರ್ಮಿಕ ಕಾರ್ಯಕ್ರಮವನ್ನು ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಚಿತ್ರದುರ್ಗ ಶಾಸಕ ವೀರೇಂದ್ರ ಪಪ್ಪಿ, ಮುದ್ದೇಬಿಹಾಳ ಶಾಸಕ ಸಿ.ಎಸ್. ನಾಡಗೌಡ, ಇಂಡಿ ಶಾಸಕ ಯಶವಂತರಾಯಗೌಡ ಪಾಟೀಲ, ನಾಗಠಾಣ ಶಾಸಕ ವಿಠ್ಠಲ ಧೋಂಡಿಬಾ ಕಟಕಧೋಂಡ, ಸಿಂಧಗಿ ಶಾಸಕ ಅಶೋಕ ಮಲ್ಲಪ್ಪ ಮನಗೂಳಿ, ಅಖಿಲ ಭಾರತ ಗಾಣಿಗ ಸಮಾಜ ಸಂಘದ ಕಾರ್ಯಾಧ್ಯಕ್ಷ ಮಲ್ಲಿಕಾರ್ಜುನ ಎಸ್.ಲೋಣಿ ಪಾಲ್ಗೊಳ್ಳುವರು.

ಅತಿಥಿಗಳಾಗಿ ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ, ಮಾಜಿ ಶಾಸಕರಾದ ರಮೇಶ ಭೂಸನೂರ, ಆನಂದ ನ್ಯಾಮಗೌಡ, ಮಾಜಿ ವಿಧಾನ ಪರಿಷತ್ ಸದಸ್ಯರಾದ ಜಿ.ಎಸ್. ನ್ಯಾಮಗೌಡ, ಬಿ.ಜಿ. ಪಾಟೀಲ, ಅಖಿಲ ಭಾರತ ಗಾಣಿಗ ಸಮಾಜ ಸಂಘದ ಗೌರವಾಧ್ಯಕ್ಷ ಡಾ. ಶೇಖರ ಸಜ್ಜನ, ಅಧ್ಯಕ್ಷರಾದ ಗುರಣ್ಣ ಗೋಡಿ, ಜಗದ್ಗುರು ಶ್ರೀ ಜಯದೇವ ಶಿವಯೋಗೇಶ್ವರ ಟ್ರಸ್ಟ್‌ನ ಕಾರ್ಯದರ್ಶಿ ಎನ್.ಎಸ್. ಲೋಣಿ, ಖಜಾಂಚಿ ಎಸ್.ಎಸ್. ಶಿರಾಡೋಣಿ ಹಾಗೂ ಗದಗ ಜಿಲ್ಲಾ ಗಾಣಿಗ ಸಮಾಜ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಿಂಗಿ ಪಾಲ್ಗೊಳ್ಳುವರು.

ಗದಗ ಜಿಲ್ಲೆಯ ಗಾಣಿಗ ಸಮಾಜ ಸಂಘದ ಪದಾಧಿಕಾರಿಗಳು, ಸದಸ್ಯರು, ಗಾಣಿಗ ಸಮಾಜದ ಮುಖಂಡರು, ಗುರುಹಿರಿಯರು ಪಾಲ್ಗೊಳ್ಳಬೇಕು ಎಂದು ಅಖಿಲ ಭಾರತ ಗಾಣಿಗ ವಿದ್ಯಾವರ್ಧಕ ಟ್ರಸ್ಟ್‌ನ ಕಟ್ಟಡ ಸಮಿತಿ ಸದಸ್ಯ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭವಿಷ್ಯದ ಬಗ್ಗೆ ಕುತೂಹಲವಿರಲಿ

■ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ಸಮಯ, ಸಮಯ ಪ್ರಜ್ಞೆ, ನಿರಂತರ ಅಭ್ಯಾಸ, ಭವಿಷ್ಯದ ಬಗ್ಗೆ ಕುತೂಹಲ ಇರಬೇಕು ಎಂದು ಮುಳಗುಂದ ಕೋಚಿಂಗ್ ಸೆಂಟರ್‌ನ ಉಪನ್ಯಾಸಕ ಇಸ್ಮಾಯಿಲ್ ಮುಳಗುಂದ ಹೇಳಿದರು.

ನಗರದ ಸಾಯಿಬಾಬಾ ಗುಡಿ ಹತ್ತಿರವಿರುವ ಐ ಲರ್ನ್ ಅಕಾಡೆಮಿಯಲ್ಲಿ ಪಿಯುಸಿ ವಿದ್ಯಾರ್ಥಿಗಳಿಗಾಗಿ ನಡೆದ ಸಿಇಟಿ, ಜೆಇಇ, ನೀಟ್ ಪರೀಕ್ಷೆಯ ಒಂದು ದಿನದ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಿಯುಸಿ ಜೀವನಕ್ಕೆ ತಿರುವು ನೀಡುವ ಮಹತ್ವದ ಘಟ್ಟ. ಹೀಗಾಗಿ ವಿದ್ಯಾರ್ಥಿಗಳು ಸಮಯವನ್ನು ಸದುಪಯೋಗಪಡಿಸಿಕೊಂಡು ವಿದ್ಯಾಭ್ಯಾಸ ಮಾಡಬೇಕು. ವಿಜ್ಞಾನ ವಿಭಾಗದ ಮಾರ್ಗದರ್ಶಕರು ನೀಡುವ ಉಪಯುಕ್ತ ಮಾಹಿತಿಗಳನ್ನು ಸ್ಮೃತಿ ಪಟಲದಲ್ಲಿಟ್ಟುಕೊಂಡು ಸಿಇಟಿ, ಜೆಇಇ, ನೀಟ್ ಪರೀಕ್ಷೆಯಲ್ಲಿ ಯಶಸ್ವಿಯಾಗಬೇಕೆಂದು ಕಿವಿಮಾತು




ಹೇಳಿದರು. ಐ ಲರ್ನ್ ಅಕಾಡೆಮಿಯ ಸಾಧಿಕ್ ಹೊಂಬಳ ಮಾತನಾಡಿ, ವಿಜ್ಞಾನ ವಿಷಯಗಳಲ್ಲಿ ಆಸಕ್ತಿ ಮೂಡಿಸುವುದು ನಮ್ಮ ಸಂಸ್ಥೆಯ ಮುಖ್ಯ ಉದ್ದೇಶವಾಗಿದೆ. ಕನ್ನಡ ಮಾಧ್ಯಮದಲ್ಲಿ ಕಲಿತಿರುವ ವಿದ್ಯಾರ್ಥಿಗಳಿಗೆ ಮತ್ತು ಆರ್ಥಿಕವಾಗಿ ಹಿಂದುಳಿದವರಿಗೆ ಆದ್ಯತೆ ನೀಡಲಾಗುತ್ತಿದೆ. ಈ ಬಾರಿಯ ಸಿಇಟಿ, ಜೆಇಇ, ನೀಟ್ ಪೂರ್ವಭಾವಿ ಸಿದ್ಧತಾ ಪರೀಕ್ಷೆ ಉಚಿತವಾಗಿ ಜನವರಿ 12ರಂದು ನಡೆಯಲಿದೆ ಎಂದು ವಿವರಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಭೌತಶಾಸ್ತ್ರದ ವಿಷಯಕ್ಕಾಗಿ ಅನ್ನದಾನೇಶ್ವರಿ ಕಾಲೇಜು ನರೇಗಲ್ಲನ ಉಪನ್ಯಾಸಕರಾದ ಸಾಗರ ಕುಂಬಾರ, ರಸಾಯನಶಾಸ್ತ್ರ ವಿಷಯಕ್ಕಾಗಿ ಮುಳುಗುಂದ ಕೋಚಿಂಗ್ ಕ್ಲಾಸ್‌ನ ಉಪನ್ಯಾಸಕರಾದ ಇಸ್ಮಾಯಿಲ್ ಮುಳುಗುಂದ, ಗಣಿತಶಾಸ್ತ್ರದ ವಿಷಯಕ್ಕಾಗಿ ಸರ್ಕಾರಿ ಪ್ರಥಮದರ್ಜೆ ಕಾಲೇಜು ಮುಂಡರಗಿಯ ಉಪನ್ಯಾಸಕಿ ಸುಮಂಗಲ ಸೂರಪ್ಪಗೌಡರ ಹಾಜರಿದ್ದು ಕಾರ್ಯಾಗಾರ ಯಶಸ್ವಿಗೊಳಿಸಿದರು.

# ಶ್ರೀ ವೇಮನ ಜಯಂತಿ ಅದ್ಧೂರಿ ಆಚರಣೆಗೆ ನಿರ್ಧಾರ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಪ್ರತಿ ವರ್ಷದಂತೆ ಈ ವರ್ಷವೂ ಜನವರಿ 19ರಂದು ಶ್ರೀ ಮಹಾಯೋಗಿ ವೇಮನ ಜಯಂತಿಯನ್ನು ಅದ್ಧೂರಿಯಾಗಿ ಆಚರಣೆ ಮಾಡಲಾಗುವುದು ಎಂದು ಹುಬ್ಬಳ್ಳಿ ಶಹರ ತಹಸೀಲ್ದಾರ ಕಲಗೌಡ ಪಾಟೀಲ ಹೇಳಿದರು.

ಬುಧವಾರ ತಾಲೂಕು ಆಡಳಿತಸೌಧದ ತಾಲೂಕು ಪಂಚಾಯತ ಸಭಾಭವನದಲ್ಲಿ ಶ್ರೀ ಮಹಾಯೋಗಿ ವೇಮನ ಜಯಂತಿ ಪೂರ್ವಭಾವಿ ಸಭೆಯಲ್ಲಿ ಅವರು ಮಾತನಾಡಿದರು.

ಅಂದು ಶ್ರೀ ಮಹಾಯೋಗಿ ವೇಮನ ಅವರ ಭಾವಚಿತ್ರಕ್ಕೆ



ಪುಷ್ಪಾರ್ಪಣೆ ಅರ್ಪಿಸಿ, ಪೂಜೆ ಸಲ್ಲಿಸಲಾಗುವುದು. ಅಲ್ಲದೇ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಗುತ್ತದೆ ಎಂದರು.

ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಜಿ.ಬಿ. ಮಜ್ಜಗಿ ಮಾತನಾಡಿ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಮಾಜದ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಕಾರ್ಯಕ್ರಮವನ್ನು ಯಶ್ವಸಿಗೊಳಿಸಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಸಹಾಯಕ ಕೃಷಿ ಅಧಿಕಾರಿ ಮಂಜುಳಾ ತೆಂಬದ, ಕೃಷಿ ಅಧಿಕಾರಿ ಮಂಜುಳಾ ಸುರಗೊಂಡ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಆತೀಕಾ ಸಿದ್ದಿ, ಕಂದಾಯ ನಿರೀಕ್ಷಕರಾದ ಬಿ.ಕೆ. ಸಂಶಿ, ಈರಣಗೌಡ ಐಯನಗೌಡರ, ಸಮಾಜದ ಮುಖಂಡರಾದ ರಮೇಶ ಕಾಲವಾಡ, ಪ್ರಕಾಶ ಎಚ್., ಉದಯ ಹೊಸಮನಿ, ರಘುನಾಥಗೌಡ ಕೆಂಪಲಿಂಗನಗೌಡ, ಬಸವರಾಜ ಕಳಕರೆಡ್ಡಿ, ಮೋಹನ ಹೊಸಮನಿ, ಎ.ಎಸ್. ಅಂಗಡಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

# ಶಸ್ತ್ರಾಸ್ತ್ರ ಹೋರಾಟಕ್ಕೆ ಗುಡ್‌ಬೈ: ಸಿಎಂ ಮುಂದೆ 6 ನಕ್ಸಲರು ಶರಣಾಗತಿ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮನವಿ ಮೇರೆಗೆ ಬುಧವಾರ ಸಿಎಂ ಸಿದ್ದರಾಮಯ್ಯ ಹಾಗೂ ಗೃಹ ಸಚಿವರಾದ ಡಾ. ಜಿ ಪರಮೇಶ್ವರ್ ಅವರ ಸಮ್ಮುಖದಲ್ಲಿ ಮೋಸ್ಟ್ ವಾಂಟೆಂಡ್ ಆರು ನಕ್ಸಲರು ಬೆಂಗಳೂರಲ್ಲಿ ಶರಣಾಗಿದ್ದಾರೆ.

ಕಳೆದ ಹಲವು ವರ್ಷಗಳಿಂದ ಕಾಡಿನೊಳಗೆ ಅಡಗಿ ಕುಳಿತು ಸದಾ ಸಂಘರ್ಷ, ರಕ್ತಚರಿತ್ರೆ ಬರೆ-ಯುತ್ತಿದ್ದ ನಕ್ಸಲರು ಇದೀಗ ಮುಖ್ಯವಾಹಿನಿಗೆ ಬಂದಿದ್ದಾರೆ. ಆರು ನಕ್ಸಲರು ಬುಧವಾರ ಸಂಜೆ ಗೃಹ ಕಚೇರಿ ಕೃಷ್ಣದಲ್ಲಿ ಮುಖ್ಯಮಂತ್ರಿ



ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಹಾಗೂ ಗೃಹ ಸಚಿವ ಡಾ ಜಿ ಪರಮೇಶ್ವರ್ ಸಮ್ಮುಖದಲ್ಲಿ ಶರಣಾಗಿದ್ದಾರೆ. ಇನ್ನು ಶರಣಾದ ನಕ್ಸಲರಿಗೆ ಸಿಎಂ, ಸಂವಿಧಾನದ ಪುಸ್ತಕ ನೀಡಿದರು.

ಆರು ನಕ್ಸಲರಾದ ಶೃಂಗೇರಿ ತಾಲೂಕಿನ ಮುಂಡುಗಾರು ಗ್ರಾಮದ ಲತಾ, ಕಳಸ ತಾಲೂಕಿನ ಬಾಳೆಹೊಳೆ ಗ್ರಾಮದ ವನಜಾಕ್ಷಿ, ದಕ್ಷಿಣ ಕನ್ನಡ ಜಿಲ್ಲೆ ಕುಂತಲೂರು ಮೂಲದ ಸುಂದರಿ, ರಾಯಚೂರು ಮೂಲದ ಮಾರಪ್ಪ ಅರೋಳಿ, ವಸಂತ, ಎನ್.ಜೀಶಾ ಹಲವು ವರ್ಷಗಳ ಸಶಸ್ತ್ರ ಹೋರಾಟಕ್ಕೆ ಗುಡ್ ಬೈ ಹೇಳಿ ಮುಖ್ಯವಾಹಿನಿಗೆ ಬಂದಿದ್ದಾರೆ.

ಈ ವೇಳೆ ಡಿಜಿ ಐಜಿಪಿ ಅಲೋಕ್ ಮೋಹನ್, ಹಿರಿಯ ಪೊಲೀಸ್ ಅಧಿಕಾರಿಗಳು ಹಾಗೂ ಶರಣಾಗತಿಯಾದ ಆರು ನಕ್ಸಲರ ಕುಟುಂಬದವರು ಉಪಸ್ಥಿತರಿದ್ದರು.

ಇನ್ನು ತಮ್ಮ ಸಮ್ಮುಖದಲ್ಲೇ ಮುಖ್ಯವಾಹಿನಿ ಬಂದಿರುವ ನಕ್ಸಲರ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಸಭೆ ನಡೆಸಿದ್ದು, ಅವರ ಸಮಸ್ಯೆ, ಬೇಡಿಕೆಗಳನ್ನು ಆಲಿಸಿದ್ದಾರೆ. ಅಲ್ಲದೇ ಅವರ ಪ್ರೋತ್ಸಾಹ ಧನದ ಬಗ್ಗೆ ಚರ್ಚಿಸಿದ್ದಾರೆ.

ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಸಹಾಯಕ ಪ್ರಾಧ್ಯಾಪಕರಿಗೆ ಗೌರವ

# ಮೂವರಿಗೆ ಪಿ.ಎಚ್.ಡಿ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಮಹಾವಿದ್ಯಾಲಯದ ವಿದ್ಯುನ್ಮಾನ ವಿಭಾಗದ ಸಹಾಯಕ ಪ್ರಾಧ್ಯಾಪಕ ಪ್ರೊ. ಪ್ರಕಾಶ ಮರಕುಂಬಿ ಅವರು ಧಾರವಾಡದ ಎಸ್.ಡಿ.ಎಮ್. ಕಾಲೇಜ್ ಆಫ್ ಇಂಜಿನಿಯರಿಂಗ್ & ಟೆಕ್ನಾಲಜಿಯ ಸಂಶೋಧನಾ ಕೇಂದ್ರದಿಂದ ಡಾ. ಸತೀಶ ಬೈರಣ್ಣವರ ಇವರ ಮಾರ್ಗದರ್ಶನದಲ್ಲಿ 'ಎಫೀಶಿಯಂಟ್ ಮೆಡಿಕಲ್ ಇಮೇಜ್ ಆಥಂಟಿಕೇಶನ್ ಅಂಡ್ ಇಟ್ಸ್ ಇಂಪ್ಲಿಮೆಂಟೇಶನ್ ಇನ್ ಟೆಲಿರೆಡಿಯಾಲಜಿ' ಎನ್ನುವ ವಿಷಯದಲ್ಲಿ ಮಹಾಪ್ರಬಂಧವನ್ನು ಮಂಡಿಸಿದ್ದು, ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯ ಈ ಮಹಾಪ್ರಬಂಧಕ್ಕೆ ಪಿಎಚ್‌ಡಿ ಪ್ರದಾನ ಮಾಡಿದೆ.

ಮೆಕ್ಯಾನಿಕಲ್ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿರುವ ಮೆಹಬೂಬ್‌ಸುಬಹಾನಿ ಆರ್.ಅಳವಂಡಿ ಅವರು ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಮೆಕ್ಯಾನಿಕಲ್ ಸಂಶೋಧನಾ ಕೇಂದ್ರದ ಪ್ರಾಧ್ಯಾಪಕ ಡಾ. ಡಿ.ಎಂ. ಗೌಡರ ಇವರ ಮಾರ್ಗದರ್ಶನದಲ್ಲಿ 'ಇನ್ವೆಸ್ಟಿಗೇಷನ್ ಆಫ್ ಮೈಕ್ರೋಸ್ಟ್ರಕ್ಚರಲ್, ಮೆಕ್ಯಾನಿಕಲ್ ಅಂಡ್ ವಿಯರ್ ಬಿಹೇವಿಯರ್ ಆಫ್ ಸ್ಪ್ರೇ ಫಾರ್ಮ್ಡ್ ಹೈಪರ್ ಯುಟೆಕ್ಟಿಕ್ ಎಎಲ್‌ಎಸ್‌ಐ ಅಲಾಯ್ ವಿಥ್ ದಿ ಎಡಿಷನ್ ಆಫ್ ನಿಕ್ಕೆಲ್ ಅಂಡ್ ಕಾಪರ್' ಎನ್ನುವ ಮಹಾಪ್ರಬಂಧವನ್ನು ಮಂಡಿಸಿದ್ದು, ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಈ ಮಹಾಪ್ರಬಂಧಕ್ಕೆ ಪಿ.ಎಚ್.ಡಿ ಪ್ರದಾನ ಮಾಡಿದೆ.

ಮೆಕ್ಯಾನಿಕಲ್ ವಿಭಾಗದ ಇನ್ನೋರ್ವ ಸಹಾಯಕ ಪ್ರಾಧ್ಯಾಪಕ ಸೈಯದ್ ಹಸನ್ ಖಾಜಿ ಇವರು ತೋಂಟದಾರ್ಯ ತಾಂತ್ರಿಕ ಮಹಾವಿದ್ಯಾಲಯದ ಮೆಕ್ಯಾನಿಕಲ್ ಸಂಶೋಧನಾ ಕೇಂದ್ರದಲ್ಲಿ ಪ್ರಾಧ್ಯಾಪಕರಾದ ಡಾ. ಡಿ.ಎಂ. ಗೌಡರ ಇವರ ಮಾರ್ಗದರ್ಶನದಲ್ಲಿ 'ಇನ್ವೆಸ್ಟಿಗೇಷನ್ ಆಫ್ ಮೈಕ್ರೋಸ್ಟ್ರಕ್ಚರಲ್, ಮೆಕ್ಯಾನಿಕಲ್ ಅಂಡ್ ಟ್ರೈಬಾಲಜಿಕಲ್ ಬಿಹೇವಿಯರ್ ಆಫ್ ಹೈಪರ್ ಯುಟೆಕ್ಟಿಕ್ ಎಎಲ್‌ಎಸ್‌ಐ ಅಲಾಯ್ ವಿಥ್ ದಿ ಎಡಿಷನ್ ಆಫ್ ಟಿಟಾನಿಯಂ ಪ್ರೊಡ್ಯೂಸ್ಡ್ ಬೈ ಸ್ಪ್ರೇ ಫಾರ್ಮಿಂಗ್ ಪ್ರೊಸೆಸ್' ಎನ್ನುವ ಮಹಾಪ್ರಬಂಧವನ್ನು ಮಂಡಿಸಿದ್ದು, ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ ಈ ಮಹಾಪ್ರಬಂಧಕ್ಕೆ ಪಿ.ಎಚ್.ಡಿ ಪ್ರದಾನ ಮಾಡಿದೆ.

ಇವರ ಈ ಸಾಧನೆಗೆ ಮಹಾವಿದ್ಯಾಲಯದ ಆಡಳಿತ ಮಂಡಳಿ ಪ್ರಾಂಶುಪಾಲರಾದ ಡಾ. ಎಂ.ಎಂ. ಅವಟಿ, ಮಾರ್ಗದರ್ಶಕರಾದ ಡಾ. ಡಿ.ಎಂ. ಗೌಡರ, ಮೆಕ್ಯಾನಿಕಲ್ ವಿಭಾಗದ ಮುಖ್ಯಸ್ಥರಾದ ಡಾ. ಜಿ.ಡಿ. ರೇವಣಕರ್, ವಿದ್ಯುನ್ಮಾನ ವಿಭಾಗದ ಮುಖ್ಯಸ್ಥರಾದ ಪ್ರೊ. ಜಗದೀಶ ಶಿವನಗುತ್ತಿ ಸೇರಿದಂತೆ ಎಲ್ಲ ವಿಭಾಗದ ಮುಖ್ಯಸ್ಥರು, ಎಲ್ಲ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಶುಭ ಹಾರೈಸಿದ್ದಾರೆ.

### ಪೋಕ್ಸೋ ಆರೋಪಿಗೆ ರಕ್ಷಣೆ : ಇನ್‌ಸ್ಪೆಕ್ಟರ್, ಎಡಿಎಂಕೆ ಕಾರ್ಯಕರ್ತನ ಬಂಧನ

■ವಿಜಯಸಾಕ್ಷಿ ಸುದ್ದಿ, ಚೆನ್ನೈನ

ಪೋಕ್ಸೋ ಪ್ರಕರಣದ ಆರೋಪಿಯನ್ನು ಬಂಧನದಿಂದ ರಕ್ಷಿಸಿ ಕಾನೂನುಬಾಹಿರ ಕೃತ್ಯವೆಸಗಿದ ಪ್ರಕರಣದಲ್ಲಿ ಚೆನ್ನೈನ ಅಣ್ಣಾ ನಗರ ಮಹಿಳಾ ಠಾಣೆಯ ಇನ್‌ಸ್ಪೆಕ್ಟರ್ ಮತ್ತು ಎಐಎಡಿಎಂಕೆ ಪಕ್ಷದ ಕಾರ್ಯಕರ್ತನನ್ನು ವಿಶೇಷ ತನಿಖಾ ತಂಡ (ಎಸ್‌ಐಟಿ) ಬಂಧಿಸಿದೆ. ಅಣ್ಣಾ ನಗರ ಮಹಿಳಾ (ಎಲ್ಲಾ) ಠಾಣೆಯ ಇನ್‌ಸ್ಪೆಕ್ಟರ್ ರಾಜಿ ಮತ್ತು ಎಐಎಡಿಎಂಕೆ ಪಕ್ಷದ ಕಾರ್ಯಕರ್ತ ಸುಧಾಕರ್ ಬಂಧನಕ್ಕೊಳಗಾದ ಆರೋಪಿಗಳು ಎಂದು ದಿ ನ್ಯೂಸ್ ಮಿನಿಟ್ ವರದಿ ಹೇಳಿದೆ.

ಕಂದಾಯ ಇಲಾಖೆ ನೌಕರರ ಕುಂದು ಕೊರತೆ ಸಭೆಯಲ್ಲಿ ಜಿಲ್ಲಾಧಿಕಾರಿ ದಿವ್ಯ ಪ್ರಭು

# ವೃತ್ತಿಯಲ್ಲಿ ಬದ್ಧತೆ ಇರಲಿ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕಂದಾಯ ಇಲಾಖೆ ಸರಕಾರದ ಪ್ರಮುಖ ಮತ್ತು ದೊಡ್ಡ ಇಲಾಖೆ. ಸರಕಾರದ ಜನ ಕಲ್ಯಾಣ ಕಾರ್ಯಕ್ರಮಗಳನ್ನು ಸಾರ್ವಜನಿಕರಿಗೆ ತಲುಪಿಸುವಲ್ಲಿ ಅತ್ಯಂತ ಮಹತ್ವದ ಪಾತ್ರ ನಿರ್ವಹಿಸುವ ಈ ಇಲಾಖೆ ಅಧಿಕಾರಿ, ಸಿಬ್ಬಂದಿಗಳಿಗೆ ಅರ್ಹತೆ ಆಧಾರದಲ್ಲಿ ಪದೋನ್ನತಿ, ಸರಕಾರಿ ಸೌಲಭ್ಯಗಳನ್ನು ನೀಡಲು ಜಿಲ್ಲಾಡಳಿತ ಬದ್ಧವಾಗಿದೆ. ಪ್ರತಿಯೊಬ್ಬರು ಅವರವರ ಕರ್ತವ್ಯಗಳನ್ನು ಬದ್ಧತೆಯಿಂದ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪ್ರಥಮ ಬಾರಿಗೆ ಜಿಲ್ಲಾ ಕಂದಾಯ ನೌಕರರ ಕುಂದುಕೊರತೆ ಸಭೆ ಜರುಗಿಸಿ, ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸರಕಾರಿ ಸೇವೆಗೆ ಸೇರಿದ ಪ್ರತಿಯೊಬ್ಬರು ಅಗತ್ಯಕ್ಕೆ ಅನುಗುಣವಾಗಿ ದಿನದ 24 ಗಂಟೆ ಕರ್ತವ್ಯ ನಿರ್ವಹಿಸಲು ಸಿದ್ಧರಿರಬೇಕು. ಇದು ಕಂದಾಯ ಇಲಾಖೆಗೆ ಹೆಚ್ಚು ಅನ್ವಯಿಸುತ್ತದೆ. ಕಂದಾಯ ಇಲಾಖೆ ಅಧಿಕಾರಿ, ಸಿಬ್ಬಂದಿಗಳಿಗೆ ಅಗತ್ಯ ಸೌಲಭ್ಯ ಮತ್ತು ಬಾಕಿ ಇರುವ ಬಡ್ತಿಗಳನ್ನು ನಿಯಮಾನುಸಾರ ನೀಡಲು ಕ್ರಮ ಕೈಗೊಳ್ಳುತ್ತೇವೆ. ಮುಂದಿನ 15 ದಿನಗಳಲ್ಲಿ ಎಲ್ಲ ತಹಸೀಲ್ದಾರರು ಆಯಾ ತಾಲೂಕು ಮಟ್ಟದಲ್ಲಿ ಕಂದಾಯ ನೌಕರರ ಸಭೆ ಜರುಗಿಸಿ, ವಿವರವಾದ




ಸಾರ್ವಜನಿಕರಿಗೆ ನೀಡುವ ಸೇವೆಯಲ್ಲಿ ವಿಳಂಬವಾಗಬಾರದು. ಎಲ್ಲ ಅಧಿಕಾರಿ, ಸಿಬ್ಬಂದಿಗಳು ತೃಪ್ತಿ ಮತ್ತು ಸಂತೋಷದಿಂದ ತಮ್ಮ ಕರ್ತವ್ಯಗಳನ್ನು ನಿರ್ವಹಿಸಬೇಕು. ವೃತ್ತಿಯಲ್ಲಿ ನಿಧಾನತೆ, ಪಕ್ಷಪಾತ, ಭ್ರಷ್ಟತೆ, ನಿಯಮಬಾಹಿರ ವರ್ತನೆಗಳನ್ನು ಸಹಿಸುವುದಿಲ್ಲ. ಅಂತಹ ದೂರುಗಳು ಬಂದಲ್ಲಿ ಪರಿಶೀಲಿಸಿ, ಸತ್ಯಾಂಶ ವಿದ್ದಲ್ಲಿ ಸೂಕ್ತ ಕಾನೂನು ಕ್ರಮ ಜರುಗಿಸುವುದಾಗಿ ಜಿಲ್ಲಾಧಿಕಾರಿಗಳು ಸಭೆಯಲ್ಲಿ ಎಚ್ಚರಿಕೆ ನೀಡಿದರು.

ವರದಿಯೊಂದಿಗೆ ಬಡ್ತಿ, ಆರ್ಥಿಕ ಸೌಲಭ್ಯ, ಕಚೇರಿ ನಿವೇಶನ, ಕಟ್ಟಡ, ಸಿಬ್ಬಂದಿ ವಸತಿ ಗೃಹ ಪ್ರಸ್ತಾವನೆಯನ್ನು ಉಪವಿಭಾಗಾಧಿಕಾರಿಗಳ ಮೂಲಕ ಕಡ್ಡಾಯವಾಗಿ ಸಲ್ಲಿಸಬೇಕೆಂದು ನಿರ್ದೇಶನ ನೀಡಿದರು.

ಪ್ರತಿ ಗ್ರಾಮ ಆಡಳಿತ ಅಧಿಕಾರಿಗೆ ಆಯಾ ಗ್ರಾಮದಲ್ಲಿ ಹಾಗೂ ಕಂದಾಯ ನಿರೀಕ್ಷಕರಿಗೆ ಹೋಬಳಿ ಮಟ್ಟದಲ್ಲಿ ಸುಸಜ್ಜಿತ ಕಟ್ಟಡ ಹೊಂದಲು ಅನುವು ಆಗುವಂತೆ ಕಟ್ಟಡ ನಕ್ಷೆಯೊಂದಿಗೆ ಅಗತ್ಯ ದಾಖಲೆಗಳನ್ನು ತಹಸೀಲ್ದಾರರು ಸಲ್ಲಿಸಿದಲ್ಲಿ, ಸಮಗ್ರ ವರದಿಯೊಂದಿಗೆ ಸರಕಾರಕ್ಕೆ ಜಿಲ್ಲಾಡಳಿತದಿಂದ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದರು.

ವೇದಿಕೆಯಲ್ಲಿದ್ದ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಉಪವಿಭಾಗಧಿಕಾರಿ ಶಾಲಂ ಹುಸೇನ್ ಮಾತನಾಡಿದರು. ಕಂದಾಯ ನೌಕರ ಸಂಘದ ಜಿಲ್ಲಾ ಅಧ್ಯಕ್ಷ ವೆಂಕಟೇಶ ಹಟ್ಟಿಯವರ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಸಚಿನ ಮಳಗಿ ಸ್ವಾಗತಿಸಿದರು. ಖಜಾಂಚಿ ನಾಸೀರ್ ಅಮರಗೋಳ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಆನಂದ ನಾಯಕ ವಂದಿಸಿದರು. ಕಂದಾಯ ನೌಕರರ ಪರವಾಗಿ ಮಲ್ಲಿಕಾರ್ಜುನ ಸೊಲಗಿ, ಮಹೇಶ ನಾಗವ್ವನವರ, ಪ್ರವೀಣ ಕುಲಕರ್ಣಿ ಸಾರಂಗಿ ಸೇರಿದಂತೆ ಇತರರು ಮಾತನಾಡಿದರು.

## ನಿಧನ

### ರವಿರಾಜ ಕುರಿಯವರ



ನರೇಗಲ್ಲ, ಕೊಡಿ ಕೋಪ್ಪದ ಅನ್ನದಾನೇಶ್ವರ ಕಾಲೋನಿಯ ನಿವಾಸಿ ರವಿರಾಜ ಶಿವಪುತ್ರಪ್ಪ ಕುರಿಯವರ (37) ಬುಧವಾರ ನಿಧನರಾದರು. ಮೃತರಿಗೆ ತಾಯಿ, ಪತ್ನಿ ಸೇರಿದಂತೆ ಅಪಾರ ಬಂಧು-ಬಳಗವಿದೆ.

# ಇಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜನವರಿ 26 ರಂದು ಆಚರಿಸಲಾಗುವ ಗಣರಾಜ್ಯೋತ್ಸವ ದಿನಾಚರಣೆಯ ಪೂರ್ವಭಾವಿ ತಯಾರಿ ಕುರಿತು ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜನವರಿ 9 ರಂದು ಪೂರ್ವಾಹ್ನ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

# ಅಂಬಿಗರ ಚೌಡಯ್ಯ ಜಯಂತಿ: ಇಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಜನವರಿ 21 ರಂದು ಆಚರಿಸಲಾಗುವ ನಿಜ ಶರಣ ಅಂಬಿಗರ ಚೌಡಯ್ಯ ಜಯಂತಿ ನಿಮಿತ್ತ ಜನವರಿ 9 ರಂದು ಸಂಜೆ 4 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು ಗದಗ, ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು ಪೂರ್ವಭಾವಿ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರದ ಆದೇಶದನ್ವಯ ಜನವರಿ 14 ರಂದು ಆಚರಿಸಲಾಗುವ ಶಿವಯೋಗಿ ಶ್ರೀ ಸಿದ್ಧರಾಮೇಶ್ವರ ಜಯಂತಿ ನಿಮಿತ್ತ ಜನವರಿ 9 ರಂದು ಸಂಜೆ 5.00 ಗಂಟೆಗೆ ಅಪರ ಜಿಲ್ಲಾಧಿಕಾರಿಗಳು ಗದಗ, ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಪೂರ್ವಭಾವಿ ಸಭೆ ಕರೆಯಲಾಗಿದೆ. ಸಭೆಗೆ ಹಾಜರಾಗಿ ಸಲಹೆ/ಅಭಿಪ್ರಾಯ ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### 2024ರ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭ: ಅಶೋಕ ಮಂದಾಲಿ ಮಾಹಿತಿ

# ಅರ್ಹತೆಯುಳ್ಳವರು ಅರ್ಜಿ ಸಲ್ಲಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ ಹಾಗೂ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ ವತಿಯಿಂದ 2024ರ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆ ಆರಂಭವಾಗಿದ್ದು, ಅರ್ಹ ವಿದ್ಯಾರ್ಥಿಗಳು, ನಿರುದ್ಯೋಗಿಗಳು ಽಣಣಠಿ://ಜತಿಛಿಟಿಜಷಣಾ.ಇಚಿಡಿಟಿಚಿಣಚಿಇಚಿ. ರಠಿತ.ಿಟಿ ಸೇವಾಸಿಂಧು ವೆಬ್ ಪೋರ್ಟಲ್‌ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದು ಎಂದು ಗದಗ ತಾಲೂಕಾ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಅಶೋಕ ಮಂದಾಲಿ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, 2023 ಮತ್ತು 2024ನೇ ಸಾಲಿನಲ್ಲಿ ಸ್ನಾತಕೋತ್ತರ ಪದವಿ, ಪದವಿ ಹಾಗೂ ಡಿಪ್ಲೋಮಾ ಪದವಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳು ಕಳೆದ 6 ತಿಂಗಳುಗಳ ಕಾಲ ಸರಕಾರಿ, ಖಾಸಗಿ ಹಾಗೂ ಸ್ವಯಂ ಉದ್ಯೋಗ ಹೊಂದಿಲ್ಲದವರು ಪ್ರತಿ ತಿಂಗಳು ನಿರುದ್ಯೋಗ




ಭತ್ಯೆ ಪಡೆಯಬಹುದಾಗಿದೆ.

ಪ್ರತಿ ತಿಂಗಳು ಯುವನಿಧಿ ಯೋಜನೆಯ ಪ್ರಯೋಜನ ಪಡೆಯಬೇಕಿದ್ದರೆ, ಸೇವಾಸಿಂಧು ಪೋರ್ಟಲ್‌ನಲ್ಲಿ ಪ್ರತಿ ತಿಂಗಳು ತಾನು ನಿರುದ್ಯೋಗಿ ಎಂದು, ಉನ್ನತ ವ್ಯಾಸಂಗ ಮುಂದುವರೆಸುತ್ತಿಲ್ಲವೆಂದು ಹಾಗೂ ಸ್ವಯಂ ಉದ್ಯೋಗಿ ಅಲ್ಲವೆಂದು ಪ್ರತಿ ತಿಂಗಳ 25ನೇ ತಾರೀಖಿನೊಳಗಾಗಿ ಸ್ವಯಂ ಘೋಷಣೆ ಮಾಡುವುದು ಕಡ್ಡಾಯವಾಗಿದೆ.

ಅಭ್ಯರ್ಥಿಗಳು ಕರ್ನಾಟಕ ಒನ್/ಗ್ರಾಮ ಒನ್,



ಬೆಂಗಳೂರು ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಯೋಜನೆಗೆ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸುವಾಗ ಕಡ್ಡಾಯವಾಗಿ ಆಧಾರ್ ಲಿಂಕ್ ಆಗಿರುವ ಬ್ಯಾಂಕ್ ಖಾತೆ ಹಾಗೂ ಆಧಾರ್ ಲಿಂಕ್ಡ್ ಮೊಬೈಲ್ ಸಂಖ್ಯೆ ಹೊಂದಿರಬೇಕು. ಅರ್ಜಿ ಸಲ್ಲಿಸಿದ ನಂತರ ಪೋರ್ಟಲ್‌ನಲ್ಲಿ ತಮ್ಮ ಅರ್ಜಿ ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಳ್ಳಬಹುದು.

ಒಂದು ವೇಳೆ ಅರ್ಜಿಯು ಅನುಮೋದನೆ ಆಗದಿದ್ದಲ್ಲಿ ಸಂಬಂಧಿಸಿದ ಇಲಾಖೆಯ ಕಚೇರಿಗಳಿಗೆ ತಮ್ಮ ಎಲ್ಲಾ ಮೂಲ ಅಂಕಪಟ್ಟಿ ಹಾಗೂ ಇತರೆ ಪ್ರಮಾಣ ಪತ್ರಗಳೊಂದಿಗೆ ಖುದ್ದಾಗಿ ಭೇಟಿ ನೀಡಿ ಅನುಮೋದನೆ ಮಾಡಿಸಿಕೊಳ್ಳಬೇಕು ಎಂದು ಗದಗ ತಾಲೂಕ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಗದಗ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಅಶೋಕ ಮಂದಾಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

> ಯೋಜನೆಯಡಿ ಪದವೀಧರರಿಗೆ ಪ್ರತಿ ತಿಂಗಳು 3 ಸಾವಿರ ರೂ. ಹಾಗೂ ಡಿಪ್ಲೋಮಾ ಉತ್ತೀರ್ಣರಾದವರಿಗೆ 1,500 ರೂ. ನಿರುದ್ಯೋಗ ಭತ್ಯೆಯನ್ನು ಉದ್ಯೋಗ ಸಿಗುವವರೆಗೆ ಅಥವಾ ಗರಿಷ್ಠ 2 ವರ್ಷದವರೆಗೆ ನೀಡಲಾಗುತ್ತದೆ. ಫಲಿತಾಂಶದ ನಂತರ ಹೆಸರನ್ನು ನೋಂದಾಯಿಸಿಕೊಂಡ ಅಭ್ಯರ್ಥಿಗಳು ನಿರುದ್ಯೋಗಿಗಳಾಗಿ 180 ದಿನಗಳನ್ನು ಪೂರೈಸಿ, ನಂತರವೂ ನಿರುದ್ಯೋಗಿಗಳಾಗಿದ್ದಲ್ಲಿ ನೇರ ನಗದು ವರ್ಗಾವಣೆ ಮಾಡಲಾಗುತ್ತಿದೆ.

# ನೈರುತ್ಯ ರೇಲ್ವೆ ಡಿ.ಆರ್.ಎಂ. ಬೇಲಾಮೀನಾರಿಗೆ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ನೈರುತ್ಯ ರೇಲ್ವೆ ವಲಯದ ಡಿವ್ಹಿಜನಲ್ ರೇಲ್ವೆ ಮ್ಯಾನೇಜರ್ ಬೇಲಾಮೀನಾ ಇವರು ನೂತನವಾಗಿ ಅಧಿಕಾರ ವಹಿಸಿಕೊಂಡು ಪ್ರಥಮವಾಗಿ ಗದಗ ರೇಲ್ವೆ ನಿಲ್ದಾಣದ ವೀಕ್ಷಣೆಗೆ ಆಗಮಿಸಿದ ಸಂದರ್ಭದಲ್ಲಿ ಅವರನ್ನು ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ತಾತನಗೌಡ ಎಸ್.ಪಾಟೀಲ ಹಾಗೂ ಜಡ್‌ಆರ್‌ಯುಸಿಸಿ ಸಮಿತಿ ಸದಸ್ಯರು, ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ರೇಲ್ವೆ ಉಪ ಸಮಿತಿ ಚೇರಮನ್ ಜಿ.ಕೆ. ಆದಪ್ಪಗೌಡ್ರ ಇವರ ನಿಯೋಗದೊಂದಿಗೆ ಸನ್ಮಾನಿಸಿ ಗೌರವಿಸಿದರು.




ಈ ಸಂದರ್ಭದಲ್ಲಿ ಮನವಿ ಸಲ್ಲಿಸಿದ ನಿಯೋಗವು, ಸದ್ಯ ಚಲಿಸುತ್ತಿರುವ ಮೇಮೋ ಮತ್ತು ಡೆಮೋ ಹಾಗೂ ವಂದೇ ಭಾರತ್ ರೈಲುಗಳ ವರ್ಕ್‌ಶಾಪ್‌ನ್ನು ಹುಬ್ಬಳ್ಳಿ ಅಥವಾ ಗದಗ ನಗರದಲ್ಲಿ ಸ್ಥಾಪಿಸುವುದು, ಬಹುಮುಖ ವಿದ್ಯುತ್ ಚಾಲಿತ ರೈಲುಗಳ ರಿಪೇರಿಗಾಗಿ ವರ್ಕ್‌ಶಾಪ್‌ನ್ನು ಹುಬ್ಬಳ್ಳಿ ಅಥವಾ ಗದಗದಲ್ಲಿ ಸ್ಥಾಪಿಸುವದು, ಬಹಳ ವರ್ಷಗಳಿಂದ ನೆನೆಗುದಿಗೆ ಬಿದ್ದರುವ ಹುಬ್ಬಳ್ಳಿ-ಅಂಕೋಲಾ ಹೊಸ ರೈಲ್ವೆ ಮಾರ್ಗ ರಚಿಸುವಲ್ಲಿ ಇರುವ ಅಡಚರಣೆಗಳನ್ನು ನಿವಾರಿಸಿ ಶೀಘ್ರವೇ ರೈಲ್ವೆ ಮಾರ್ಗ ರಚಿಸುವದು, ಪ್ರಗತಿಯಲ್ಲಿ ಇರುವ ಹೊಸ ರೈಲ್ವೆ ಮಾರ್ಗಗಳ ರಚನೆಗಳನ್ನು ಬೇಕಾಗುವ ಹಣಕಾಸು ಹಾಗೂ ಮಾರ್ಗ ರಚನೆಗೆ ಭೂಮಿಯನ್ನು ವಶಪಡಿಸಿಕೊಳ್ಳುವದು, ಹೊಸ ರೈಲು ಮಾರ್ಗ ಸರ್ವೆ ಕಾರ್ಯಗಳಿಗೆ ಮಂಜೂರಾತಿ ನೀಡುವುದು ಇವೇ ಮುಂತಾದ ವಿಚಾರಗಳನ್ನು ಪ್ರಸ್ತಾಪಿಸಿದೆ.

ನಿಯೋಗದಲ್ಲಿ ಸಂಸ್ಥೆಯ ಉಪಾಧ್ಯಕ್ಷ ಎಸ್.ಆರ್. ನಾಲತ್ವಾಡಮಠ, ಸಹ ಗೌರವ ಕಾರ್ಯದರ್ಶಿ ಸೋಮನಾಥ ಕೆ.ಜಾಲಿ, ಕೋಶಾಧ್ಯಕ್ಷ ಸಂಜಯ ಸಿ.ಬಾಗಮಾರ ಉಪಸ್ಥಿತರಿದ್ದರೆಂದು ಸಂಸ್ಥೆಯ ಗೌರವ ಕಾರ್ಯದರ್ಶಿ ಅಶೋಕಗೌಡ ಕೆ.ಪಾಟೀಲ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅತ್ಯುತ್ತಮ ಬೆಳೆ ಸಮೀಕ್ಷೆಗಾರರಿಗೆ ಸನ್ಮಾನ



■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ತಾಲೂಕು ಆಡಳಿತ ಸೌಧದ ತಹಸೀಲ್ದಾರ ಕಾರ್ಯಾಲಯದ ಸಭಾಂಗಣದಲ್ಲಿ 2024–25ನೇ ಸಾಲಿನ ಹಿಂಗಾರು ಹಂಗಾಮಿನಲ್ಲಿ ರೈತರು ತಮ್ಮ ಜಮೀನುಗಳಲ್ಲಿ ಬೆಳೆದ ಬೆಳೆಗಳ ಸಮೀಕ್ಷೆ ಕಾರ್ಯದಲ್ಲಿ ಶೇ.100ರಷ್ಟು ಸಾಧನೆಗೈದವರಿಗೆ 2024–25ನೇ ಸಾಲಿನ ಅತ್ಯುತ್ತಮ (ಪಿ.ಆರ್.) ಬೆಳೆ ಸಮೀಕ್ಷೆಗಾರರು ಎಂದು ಚನ್ನಬಸಪ್ಪ ಸು. ಮೊರಬದ, ಮೃತ್ಯುಂಜಯ ಹುಡೇದ, ಮಹೇಶ ಗಂಜಾಳ ಹಾಗೂ ಚನ್ನಬಸಪ್ಪ ತೋಟದ ಅವರನ್ನು ತಾಲೂಕು ಆಡಳಿತದಿಂದ ಅಭಿನಂದನಾ ಪತ್ರವನ್ನು ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಹುಬ್ಬಳ್ಳಿ ಶಹರ ತಹಸೀಲ್ದಾರ ಕಲಗೌಡ ಪಾಟೀಲ, ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಜಿ.ಬಿ. ಮಜ್ಜಗಿ, ಸಹಾಯಕ ಕೃಷಿ ಅಧಿಕಾರಿ ಮಂಜುಳಾ ತೆಂಬದ, ಕೃಷಿ ಅಧಿಕಾರಿ ಮಂಜುಳಾ ಸುರಗೊಂಡ, ಕಂದಾಯ ನಿರೀಕ್ಷಕರಾದ ಬಿ.ಕೆ. ಸಂಶಿ, ಈರಣಗೌಡ ಐಯನಗೌಡರ, ಅಧಿಕಾರಿಗಳು ಉಪಸ್ಥಿತರಿದ್ದರು.

# ನೂತನ ಪೊಲೀಸ್ ಹೊರ ಠಾಣೆ ಉದ್ಘಾಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹೊಸ ಬಸ್ ನಿಲ್ದಾಣದಲ್ಲಿ ನೂತನವಾಗಿ ಪೊಲೀಸ್ ಹೊರ ಠಾಣೆಯನ್ನು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಉದ್ಘಾಟಿಸಿದರು.

ಮಹಿಳೆಯರು, ಮಕ್ಕಳು ಸೇರಿದಂತೆ ಪ್ರಯಾಣಿಕರ ಸುರಕ್ಷತೆಗಾಗಿ ಹೊಸ ಬಸ್ ನಿಲ್ದಾಣದಲ್ಲಿ ನೂತನ ಪೊಲೀಸ್ ಹೊರ ಠಾಣೆಯನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹೆಚ್ಚುವರಿ ಪೊಲೀಸ್ ಅಧೀಕ್ಷಕ ಎಂ.ಬಿ.ಸಂಕದ, ಡಿವೈಎಸ್ ಪಿ ಇನಾಮದಾರ, ಕೆ.ಎಸ್.ಆರ್.ಟಿ.ಸಿ. ವಿಭಾಗೀಯ ನಿಯಂತ್ರಣಾಧಿಕಾರಿ ಡಿ.ಎಂ.ದೇವರಾಜ್, ಪೊಲೀಸ್ ಇಲಾಖೆಯ ಧೀರಜ ಶಿಂಧೆ, ಸಿದ್ದರಾಮೇಶ್ವರ ಗಡೇದ, ಡಿ. ಬಿ ಪಾಟೀಲ, ಪಿಎಸ್‌ಐ ಮಾರುತಿ ಜೋಗದಂಡಕರ್, ವಿಜಯಕುಮಾರ ಕಮಟಳ್ಳಿ ಸೇರಿದಂತೆ ಬೆಟಗೇರಿ ಬಡಾವಣೆಯ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಹಾಜರಿದ್ದರು.

# ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆಗೆ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಫೆ.4ರಂದು ಮಾಜಿ ಉಪಮುಖ್ಯಮಂತ್ರಿ ಕೆ.ಎಸ್. ಈಶ್ವರಪ್ಪನವರ ನೇತೃತ್ವದಲ್ಲಿ ಕ್ರಾಂತಿವೀರ ಬ್ರಿಗೇಡ್ ಉದ್ಘಾಟನೆಗೊಳ್ಳಲಿರುವ ಹಿನ್ನೆಲೆಯಲ್ಲಿ ಸಿದ್ಧತೆಗಳು ಭರದಿಂದ ನಡೆಯುತ್ತಿದ್ದು, ಈಶ್ವರಪ್ಪನವರ ಪುತ್ರ ಕಾಂತೇಶ ಬುಧವಾರ ಲಕ್ಷ್ಮೇಶ್ವರ ತಾಲೂಕ ಹುಲ್ಲೂರು ಗ್ರಾಮದ ಅಮೋಘ ಸಿದ್ದೇಶ್ವರಮಠದ ಶ್ರೀ ಸಿದ್ದಯ್ಯ ಸ್ವಾಮಿಗಳನ್ನು ಹಾಗೂ ಶಿರಹಟ್ಟಿಯ ತಂಗೋಡ ಗ್ರಾಮದ ವಡವಿ ಅಜ್ಜನ ಮಠದ ಶ್ರೀ ಶಿವಕುಮಾರ



ಸ್ವಾಮಿಜೀಗಳನ್ನು ಭೇಟಿ ಮಾಡಿ ಸಂಘದ ಉದ್ಘಾಟನೆಗೆ ಆಹ್ವಾನಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕಾಂತೇಶ, ಫೆ.4ರಂದು ಕ್ರಾಂತಿವೀರ ಬ್ರಿಗೇಡ್ ಸಂಘದ ಉದ್ಘಾಟನೆಗೊಳ್ಳಲಿದ್ದು, ಅಂದು 1008 ಸ್ವಾಮೀಜಿಗಳ ಪಾದಪೂಜೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮಕ್ಕೆ ನಾಡಿನ ನಾನಾ ಭಾಗಗಳಿಂದ ಸಾವಿರಾರು ಜನರು ಆಗಮಿಸುತ್ತಿದ್ದು, ಇದು ಯಾರ ವಿರುದ್ಧದ ಕಾರ್ಯಕ್ರಮವಲ್ಲ.

ಇದು ಸಂಘಟನೆಯ ಉದ್ದೇಶವಾಗಿದೆ. ಬಹುತೇಕ ಮಠಾಧೀಶರು ಆಗಮಿಸಿ ಕಾರ್ಯಕ್ರಮಕ್ಕೆ ಆಶೀರ್ವಾದ ನೀಡಲಿದ್ದಾರೆ ಎಂದು ತಿಳಿಸಿದರು.

ಈ ವೇಳೆ ಶ್ರೀ ಮಠದ ಭಕ್ತರು, ಕಾರ್ಯಕರ್ತರು ಹಾಜರಿದ್ದರು.

### ಗದಗ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ

# ಹಿರಿಯರ ಕಡೆಗಣನೆಗೆ ಸಾಹಿತಿ ಕಮ್ಮಾರ ವಿಷಾದ

■ ವಿಜಯಸಾಕ್ಷಿ ಸುದ್ದಿ, ಗದಗ

ಮುದ್ರಣ ಕಾಶಿ ಖ್ಯಾತಿಯ ಗದಗ ಜಿಲ್ಲೆ ಐತಿಹಾಸಿಕ ಹಿನ್ನೆಲೆಯ ತಾಣ. ಸೌಹಾರ್ದತೆ ಎಂದಾಕ್ಷಣ ನೆನಪಿಗೆ ಬರುವ ಜಿಲ್ಲೆ ಗದಗ. ಸಂಗೀತ ಲೋಕದ ಬ್ರಹ್ಮ, ಪಂಡಿತ ಪುಟ್ಟರಾಜ ಗುರುವರ್ಯರು ನಡೆದಾಡಿ ಪಾವನಗೊಳಿಸಿದ ಈ ಪುಣ್ಯಭೂಮಿ ಗದುಗಿನಲ್ಲಿ ಜರುಗುವ ಕಾರ್ಯಕ್ರಮಗಳನ್ನು ನಮ್ಮ ರಾಜ್ಯದ ನೆರೆಯ ಬಹುತೇಕ ಜಿಲ್ಲೆಯ ಸಾಹಿತಿಗಳು ಪ್ರಶಂಸಿಸಿ ಗೌರವಿಸುತ್ತಾರೆ. ಇಂತಹ ವಿಶಿಷ್ಟ ಪರಂಪರೆಯ ಗದುಗಿನಲ್ಲಿ ಜರುಗುವ ಸಂಗೀತ, ಸಾಹಿತ್ಯ, ಕಲೆ ಮುಂತಾದ ಕಾರ್ಯಕ್ರಮಗಳು ಬಹಳಷ್ಟು ನೆಮ್ಮದಿ ಮತ್ತು ಖುಷಿ ನೀಡುವ ಮೂಲಕ ಇತರರಿಗೆ ಮಾದರಿ ಎನ್ನುವಂತಿರುತ್ತವೆ.


ಈ ನಿಟ್ಟಿನಲ್ಲಿ ಗದಗ ಪರಿಸರದಲ್ಲಿ ನಡೆಯುವ ಕಾರ್ಯಕ್ರಮ ಅರ್ಥಪೂರ್ಣವಾಗಿರಲೆಂಬುದೇ ಗದಗ ಜಿಲ್ಲೆಯ ಪ್ರಜ್ಞಾವಂತ ಹಿರಿಯರ ಆಶಯ. ಆದರೆ ಇತ್ತೀಚೆಗೆ ಗದಗ ಜಿಲ್ಲೆ ಕನ್ನಡ ಸಾಹಿತ್ಯ ಪರಿಷತ್ತಿನಿಂದ




ಜರುಗುವ ಕಾರ್ಯಕ್ರಮಗಳು ಬಹುತೇಕ ಹಿರಿಯ ಸಾಹಿತಿಗಳಿಗೆ ಬೇಸರವನ್ನುಂಟು ಮಾಡಿದೆ ಎಂದು ಹಿರಿಯ ಪತ್ರಕರ್ತ, ಸಾಹಿತಿ ಐ.ಕೆ. ಕಮ್ಮಾರ ವಿಷಾದಿಸಿದ್ದಾರೆ.

ಜ.20 ಮತ್ತು 21ರಂದು ಗದಗ ಜಿಲ್ಲೆಯ ಗಜೇಂದ್ರಗಡದಲ್ಲಿ ಜಿಲ್ಲಾಮಟ್ಟದ ಸಾಹಿತ್ಯ ಸಮ್ಮೇಳನವನ್ನು ಆಯೋಜಿಸಲಾಗಿದೆ. ಈ ವಿಷಯ ಗೊತ್ತಾಗಿದ್ದು, ವಾಟ್ಸ್‌ಆಪ್ ಹಾಗೂ ಪತ್ರಿಕೆಗಳ ಮೂಲಕ ಮಾತ್ರ. ಜಿಲ್ಲಾಮಟ್ಟದ ಸಮ್ಮೇಳನದ ಬಗ್ಗೆ ಯಾರಿಗೂ ತಿಳಿಸದೇ ಕೇವಲ ಬೆರಳಣಿಕೆಯಷ್ಟು ಪುಣ್ಯಾತ್ಮರನ್ನೇ ಆಹ್ವಾನಿಸಿ ತೆಗೆದುಕೊಳ್ಳುವ ನಿರ್ಧಾರ ಒಳ್ಳೆಯ ಬೆಳವಣಿಗೆ ಅಲ್ಲ ಎಂದು ವಿಷಾದ ವ್ಯಕ್ತಪಡಿಸಿದ್ದಾರೆ.

ಕನ್ನಡ ಸಾಹಿತ್ಯ ಸ'ವ್'ಮ್ಮೇಳ'ನ'ವ'ಂದ'ರ' ಕನ್ನಡದ ಮನಸ್ಸುಗಳನ್ನು ಬೆಸೆಯುವಂತಿರಬೇಕು. ಜಿಲ್ಲೆಯ ಪ್ರತಿಯೊಬ್ಬರನ್ನೂ ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಕಷ್ಟದ ಕೆಲಸವಾದರೂ, ಜಿಲ್ಲೆಯ ಬಹುತೇಕ ಸಾಧಕ, ಸಾಹಿತಿಗಳ ಗಮನಕ್ಕೆ ಬಾರದಿರುವುದು ವಿಷಾದನೀಯ. ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಮುಂದಿನ ದಿನಮಾನಗಳಲ್ಲಿ ಒಳ್ಳೆಯ ಕಾರ್ಯಗಳನ್ನು ಮಾಡುವಂತಾಗಲಿ ಎಂದು ತಿಳಿಸಿದ್ದಾರೆ.



ಗದಗ ಜಿಲ್ಲೆಯ ನೂತನ ಜಿಲ್ಲಾಧಿಕಾರಿಯಾಗಿ ಸಿ.ಎನ್. ಶ್ರೀಧರ್ ಅಧಿಕಾರ ಸ್ವೀಕರಿಸಿದರು. ಸರ್ಕಾರದ ಆದೇಶದ್ವನಯ ಬುಧವಾರ ಅಪರಾಹ್ನ ಐಎಎಸ್ ಅಧಿಕಾರಿ ಗೋವಿಂದರೆಡ್ಡಿ ಅವರು ಗದಗ ಜಿಲ್ಲಾಧಿಕಾರಿ ಹುದ್ದೆಯ ಅಧಿಕಾರವನ್ನು ಹೂಗುಚ್ಛ ನೀಡುವ ಮೂಲಕ ಐಎಎಸ್ ಅಧಿಕಾರಿ ಸಿ.ಎನ್. ಶ್ರೀಧರ ಅವರಿಗೆ ಹಸ್ತಾಂತರ ಮಾಡಿದರು.

# ಶ.ಸಾ.ಪ ಪದಾಧಿಕಾರಿಗಳ ಸೇವಾದೀಕ್ಷಾ ಸಮಾರಂಭ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ನೂತನ ಪದಾಧಿಕಾರಿಗಳ ಸೇವಾದೀಕ್ಷಾ ಸಮಾರಂಭ ಜ.10ರಂದು ಬೆಳಿಗ್ಗೆ 10 ಗಂಟೆಗೆ ನಗರದ ಪೂಜ್ಯ ಶ್ರೀಡಾ.ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳವರ ಅನುಭವ ಮಂಟಪದಲ್ಲಿ ಜರುಗಲಿದೆ.

ಕಾರ್ಯಕ್ರಮದಲ್ಲಿ ಡಂಬಳ ಗದಗ ತೋಂಟದಾರ್ಯ ಸಂಸ್ಥಾನಮಠದ ಪೂಜ್ಯ ಶ್ರೀಮನ್ನಿರಂಜನ ಜಗದ್ಗುರು ಡಾ.ತೋಂಟದ ಸಿದ್ಧರಾಮ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಉದ್ಘಾಟನೆಯನ್ನು ಮಾಜಿ ಶಾಸಕ ಡಿ.ಆರ್. ಪಾಟೀಲ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಮಾಜಿ ಸಚಿವ ಎಸ್.ಎಸ್. ಪಾಟೀಲ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಕೆ.ಎಸ್. ಚಟ್ಟಿ, ಶಸಾಪ ಮಾಜಿ ಜಿಲ್ಲಾಧ್ಯಕ್ಷ ಅ.ಓಂ. ಪಾಟೀಲ, ಚನ್ನಬಸಪ್ಪ ಕಂಠಿ ಉಪಸ್ಥಿತಿ ವಹಿಸಲಿದ್ದು, ವಚನ ಗಾಯನವನ್ನು ನೀಲಮ್ಮ ಕುಳಗೇರಿ ಹಾಗೂ ರೇಣುಕಾ ಲಕ್ಕುಂಡಿ ಪ್ರಸ್ತುತಪಡಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಯು.ಪಿ.ಎಸ್.ಸಿಯಲ್ಲಿ 343ನೇ ರ್‍ಯಾಂಕ್ ಪಡೆದ ಯಲ್ಲಪ್ಪ ಮಾರುತಿ ಗೋಶ್ಯಲ್ಲನವರ ಹಾಗೂ ಜಿಲ್ಲೆಯ 10 ನೂತನ ದತ್ತಿ ದಾನಿಗಳಿಗೆ ಸನ್ಮಾನಿಸಿ ಗೌರವಿಸಲಾಗುವದು ಎಂದು ಪರಿಷತ್ತಿನ ಜಿಲ್ಲಾಧ್ಯಕ್ಷ ಕೆ.ಎ. ಬಳಿಗೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ‘ಶಾಂತಿ ಸುವ್ಯವಸ್ಥೆ ಇದ್ದಾಗ ರಾಜ್ಯದಲ್ಲಿ ಅಭಿವೃದ್ಧಿಯ ವೇಗ ಹೆಚ್ಚುತ್ತದೆ..’; ಪೊಲೀಸರಿಗೆ ಸಿಎಂ ಕಿವಿಮಾತು

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

‘ಅಪರಾಧಿಗಳಿಗೆ ಭಯದ ವಾತಾವರಣ, ಜನ ಸಾಮಾನ್ಯರಿಗೆ ಭಯ ಮುಕ್ತ ವಾತಾವರಣ ನಿರ್ಮಿಸಿ, ಶಾಂತಿ ಸುವ್ಯವಸ್ಥೆ ಇದ್ದಾಗ ರಾಜ್ಯದಲ್ಲಿ ಅಭಿವೃದ್ಧಿಯ ವೇಗ ಹೆಚ್ಚುತ್ತದೆ’ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗೆ ಕಿವಿಮಾತು ಹೇಳಿದರು.

ನಗರದಲ್ಲಿ ನೂತನವಾಗಿ ನಿರ್ಮಿಸಿರುವ ಚಾಮರಾಜಪೇಟೆ, ಕಬ್ಬನ್ ಪಾರ್ಕ್ ಮತ್ತು ಹೈಗ್ರೌಂಡ್ಸ್ ಪೊಲೀಸ್ ಠಾಣೆ, ಕಚೇರಿಗಳನ್ನು ಉದ್ಘಾಟಿಸಿದ ಬಳಿಕ ಪುಲಕೇಶಿ ನಗರದಲ್ಲಿ ನೂತನವಾಗಿ ನಿರ್ಮಿಸಿರುವ ಪೊಲೀಸ್ ವಸತಿ ಸಮುಚ್ಛಯಗಳನ್ನು ಉದ್ಘಾಟಿಸಿ ಮಾತನಾಡಿದರು.

“ರಾಜ್ಯದ ಜನಸಂಖ್ಯೆ 7 ಕೋಟಿ ದಾಟಿ ಹೋಗುತ್ತಿದೆ. ಇವರೆಲ್ಲರ ರಕ್ಷಣೆ, ಆಸ್ತಿ ಪಾಸ್ತಿ ಮಾನ ಪ್ರಾಣ ರಕ್ಷಿಸಿ ನೆಮ್ಮದಿಯ ಬದುಕಿಗೆ ಸುರಕ್ಷಿತ ವಾತಾವರಣ ಸೃಷ್ಟಿಸುವ ಜವಾಬ್ದಾರಿ ಪೊಲೀಸ್ ಇಲಾಖೆ ಮೇಲಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka